# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 121 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 28–11–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 121 | RNI No: KARKAN/2023/88462 | Chitradurga | Date: 28-11-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ನಿಯಮ–3ಎ ಉಲ್ಲಂಘನೆ ಕಠಿಣ ಕ್ರಮಕ್ಕೆ ಶಿಫಾರಸ್ಸು: ಜಿಲ್ಲಾಧಿಕಾರಿ 2

ಸಂವಿಧಾನದ ಮೂಲಕವೇ ರಾಷ್ಟ್ರದ ಆಡಳಿತ, ಅಭಿವೃದ್ಧಿ: ನ್ಯಾ.ಶಮೀರ್ ಪಿ.ನಂದ್ಯಾಲ್ 3

ನಂಬಿಕೆಗೆ ಯಾರು ಯಾರು ಅರ್ಹರು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗದ ಅಧಿಕಾರಿಗಳು ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ. ನ. 29 ರಂದು ಲೋಕಾಯುಕ್ತ ಪೊಲೀಸ್ ನಿರೀಕ್ಷಕರು, ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಅದೇ ದಿನ ಪೊಲೀಸ್ ಉಪಾಧೀಕ್ಷಕರು, ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಮೊಳಕಾಲ್ಮೂರು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ನ. 30 ರಂದು ಪೊಲೀಸ್ ನಿರೀಕ್ಷಕರು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ. ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಉಪಸ್ಥಿತರಿದ್ದು, ಅಹವಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಕೆಲಸಗಳನ್ನು ಮಾಡಿಕೊಡಲು ಅಧಿಕಾರಿ, ಸಿಬ್ಬಂದಿ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಲ್ಲಿ, ಅನಾವಶ್ಯಕ ವಿಳಂಬ, ಇತ್ಯಾದಿ ವಿಷಯಗಳ ದೂರುಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗದಿತ ನಮೂನೆ–1 ಮತ್ತು 2 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಿಳೆ ಕಾಣೆ

» ಚಿತ್ರದುರ್ಗ



ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿ ಗ್ರಾಮದ ರಕ್ಷ ಗಂಡ ಪರಶುರಾಮ (ಸು.20 ವರ್ಷ) ಎಂಬ ಮಹಿಳೆ ಕಾಣೆಯಾದ ಕುರಿತು ನ.26ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ರಕ್ಷ ಅವರು ಸು.4.5 ಅಡಿ ಎತ್ತರ, ದುಂಡು ಮುಖ, ದುಂಡು ಮೂಗು, ಸಾಧಾರಣ ಮೈಕಟ್ಟು, 14 ಇಂಚು ಉದ್ದದ ಕಪ್ಪು ಕೂದಲು, ಗೋದಿ ಮೈ ಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಜಾಕೆಟ್, ಮೆರೂನ್ ಬಣ್ಣದ ಸೀರೆ ಧರಿಸಿರುತ್ತಾರೆ. ಈ ಮೇಲ್ಕಂಡ ಮಹಿಳೆಯ ಕುರಿತು ಮಾಹಿತಿ ಕಂಡುಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ನ.28ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ



ಚಿತ್ರದುರ್ಗ ನಗರ ಉಪವಿಭಾಗ ಘಟಕ–2ರ ವ್ಯಾಪ್ತಿಯಲ್ಲಿ ಬರುವ ಎಫ್–15 ಮಿಲ್ ಏರಿಯಾ ಮಾರ್ಗದ ಎಂ.ಕೆ ಪ್ಯಾಲೇಸ್ ಮುಂಭಾಗದ ರಸ್ತೆ ಅಗಲೀಕರಣ ಕಾಮಗಾರಿಗೆ ಅಡ್ಡಲಾಗಿರುವ 11 ಕೆ.ವಿ/ಎಲ್.ಟಿ ಮಾರ್ಗಗಳನ್ನು ಸ್ಥಳಾಂತರಿಸುವ ಕಾಮಗಾರಿ ಚಿತ್ರದುರ್ಗ ನಗರಸಭೆ ಅವರು ನಿರ್ವಹಿಸುತ್ತಿರುವುದರಿಂದ ಇದೇ ನ.28ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಗೆ ಒಳಪಡುವ ಪ್ರದೇಶಗಳು: ಎಫ್–15 ಮಿಲ್ ಏರಿಯಾದ ಎಂ.ಕೆ ಪ್ಯಾಲೇಸ್ ಹತ್ತಿರ, ರೈಲ್ವೇ ಸ್ಟೇಷನ್, ಜೋಳಗುಡ್ಡ, ನೆಹರು ನಗರ, ಅಗಸನಕಲ್ಲು, ತಾಜ್‌ಪೀರ್ ಲೇಔಟ್, ಆಶ್ರಯ ಬಡಾವಣೆ ಹಂತ–1 ಮತ್ತು ಹಂತ–2, ಇಟಗಿ ಚನ್ನಬಸಪ್ಪ ಲೇಔಟ್, ಸದಾನಂದಯ್ಯ ಬಡಾವಣೆ, ದವಳಗಿರಿ ಬಡಾವಣೆ 3ನೇ ಹಂತ, ವಿದ್ಯಾಶ್ರೀ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು, ಗ್ರಾಹಕರು ಸಹಕರಿಸಬೇಕೆಂದು ಚಿತ್ರದುರ್ಗ ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತ ಬಹುತ್ವದ ದೇಶ: ನಾವೆಲ್ಲಾ ಮೂಲತಃ ಮಾನವರು; ಮುಖ್ಯಮಂತ್ರಿ ಸಿದ್ದರಾಮಯ್ಯ

**ಸರ್ವಧರ್ಮಸಮನ್ವಯ ಭಾರತ ಮಣ್ಣಿನ ಗುಣ. ನಮ್ಮ ಪರಂಪರೆ: ಸಿಎಂ – ಜಾತಿ–ಧರ್ಮದ ಹೆಸರಲ್ಲಿ ಮನುಷ್ಯರನ್ನು ವಿಭಜಿಸುವವರು ಧರ್ಮದ್ರೋಹಿಗಳು –ಮನುಷ್ಯ ದ್ವೇಷಿ ಇಂಥಾ ಧರ್ಮದ್ರೋಹಿಗಳ ಬಗ್ಗೆ ಎಚ್ಚರ ಇರಲಿ –ಶಿಕ್ಷಣಕ್ಕೆ ಕ್ರೈಸ್ತ ಧರ್ಮಗುರುಗಳ ಪಾತ್ರ ದೊಡ್ಡದು**

» ಬಳ್ಳಾರಿ



ಮನುಷ್ಯ ದ್ವೇಷಿ ಧರ್ಮದ್ರೋಹಿಗಳ ಬಗ್ಗೆ ಎಚ್ಚರ ಇರಲಿ. ಭಾರತ ಬಹುತ್ವದ ದೇಶ. ಸರ್ವಧರ್ಮ ಸಮನ್ವಯ ಭಾರತ ಮಣ್ಣಿನ ಗುಣ. ಇದನ್ನು ಕಾಪಾಡುವುದೇ ಪ್ರತಿಯೊಬ್ಬ ಭಾರತೀಯರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಬಳ್ಳಾರಿ ಧರ್ಮಕ್ಷೇತ್ರದ ಅಮೃತ ಮಹೋತ್ಸವವನ್ನು ಉದ್ಘಾಟಿಸಿ, ಬಡ ಕುಟುಂಬಗಳಿಗೆ ಧರ್ಮ ಸಂಸ್ಥೆ ನೀಡಿದ ಉಚಿತ ಮನೆಗಳನ್ನು ಹಸ್ತಾಂತರಿಸಿ ಮಾತನಾಡಿದರು.

ಯಾವ ಧರ್ಮವೂ ದ್ವೇಷವನ್ನು ಬೋಧನೆ ಮಾಡುವುದಿಲ್ಲ. ಪ್ರೀತಿ, ಮಾನವೀಯತೆ ಎಲ್ಲ ಧರ್ಮಗಳ ಸಾರ ಎಂದರು.

ಧರ್ಮದ ಅರ್ಥ ಬಹಳ ಸರಳ. ಬಸವಣ್ಣನವರು ಹೇಳಿರುವಂತೆ ದಯೆಯೇ ಧರ್ಮದ ಮೂಲ. ದ್ವೇಷ ಅಸೂಯೆ ಇದ್ದ ಕಡೆ ಧರ್ಮ ಇರುವುದಿಲ್ಲ. ದ್ವೇಷದಿಂದ ಸಮಾಜ ಛಿದ್ರವಾಗುತ್ತದೆ ಎಂದರು.

ನಮ್ಮ ಧರ್ಮವನ್ನು ಪಾಲಿಸೋಣ. ಎಲ್ಲ ಧರ್ಮಗಳನ್ನೂ ಸಹಿಸಿಕೊಳ್ಳುವ ಸಹಿಷ್ಣುತೆ ಬೆಳೆಸಿಕೊಳ್ಳಿ ಎನ್ನುವುದೇ ನಮ್ಮ ಸಂವಿಧಾನದ ಮಹಾನ್ ಮೌಲ್ಯ. ಇದನ್ನು ಪಾಲಿಸುವುದೇ ನಾವು ಸ್ವಾಮಿ ವಿವೇಕಾನಂದರಿಗೆ, ಸಂವಿಧಾನಕ್ಕೆ ನೀಡುವ ಮಹೋನ್ನತ ಗೌರವ ಎಂದರು.

ನಾನು ಯಾವುದೇ ಒಂದು ಧರ್ಮವನ್ನು ಓಲೈಸುವುದಿಲ್ಲ. ನಾನು ಹಿಂದುಗಳನ್ನು ಪ್ರೀತಿಸುವಂತೆಯೇ ಕ್ರೈಸ್ತ, ಮುಸ್ಲಿಂ, ಜೈನ, ಬೌದ್ಧ ಧರ್ಮದವರೆಲ್ಲರನ್ನೂ ಪ್ರೀತಿಸುತ್ತೇನೆ ಎಂದು ವಿವರಿಸಿದರು.ಹಿಂದುಳಿದವರು, ಅಲ್ಪಸಂಖ್ಯಾತರು, ಶೂದ್ರರು, ದಲಿತರು ಮತ್ತು ಇಡೀ ಮಹಿಳಾ ಕುಲವನ್ನು ಈ ಜಾತಿ ವ್ಯವಸ್ಥೆ ಶಿಕ್ಷಣದಿಂದ ವಂಚಿತರನ್ನಾಗಿ ಮಾಡಿತ್ತು. ಆದರೆ, ನಮ್ಮ ಸಂವಿಧಾನ ಇವರೆಲ್ಲರನ್ನೂ ಜಾತಿ ಸಂಕೋಲೆಯಿಂದ ಬಿಡುಗಡೆಗೊಳಿಸಿ ಶಿಕ್ಷಣ ಒದಗಿಸಿತು ಎಂದರು.ನಾನು ವೀರಮಕ್ಕಳ ಕುಣಿತಕ್ಕೆ ಸೇರಿ ಶಿಕ್ಷಣದಿಂದ ವಂಚಿತನಾಗಿದ್ದೆ. ಆದರೆ ನಮ್ಮ ಸಂವಿಧಾನ ಮತ್ತು ಒಬ್ಬ ಗುರುಗಳ ಕಾರಣದಿಂದ ನಾನು ನೇರವಾಗಿ ಐದನೇ ತರಗತಿಯಿಂದ ಶಿಕ್ಷಣ ಪಡೆದೆ. ಪರಿಣಾಮ ನಾನು ಎರಡೆರಡು ಬಾರಿ ಮುಖ್ಯಮಂತ್ರಿ ಆದೆ ಎಂದರು.ಬಸವಣ್ಣನವರು 850 ವರ್ಷಗಳ ಹಿಂದೆ ಇವನಾರವ ಎನ್ನಬೇಡಿ, ಇವ ನಮ್ಮವ ಎನ್ನಿ ಎಂದು ಜಾತಿ ವ್ಯವಸ್ಥೆಯನ್ನು ಧಿಕ್ಕರಿಸಿದ್ದರು. ಆದರೆ, ಇವತ್ತಿಗೂ ಜಾತಿ ಹೋಗಿಲ್ಲ ಎಂದರು.


ಕ್ರೈಸ್ತ ಧರ್ಮ ಗುರುಗಳು, ಕ್ರೈಸ್ತ ಸಂಸ್ಥೆಗಳು ಎಲ್ಲಾ ಧರ್ಮದ, ಎಲ್ಲಾ ಜಾತಿಯ ಬಡವರಿಗೂ ಶಿಕ್ಷಣ ಕೊಡುತ್ತಿದ್ದಾರೆ. ಇದು ಸಮಾಜಕ್ಕೆ ಬಹಳ ದೊಡ್ಡ ಕೊಡುಗೆ. ವೈಚಾರಿಕ ಮತ್ತು ವೈಜ್ಞಾನಿಕ ಶಿಕ್ಷಣ ಸಿಕ್ಕಾಗ ಮಾತ್ರ ಶಿಕ್ಷಣದ ಉದ್ದೇಶ ಈಡೇರುತ್ತದೆ ಎಂದರು. ದೇವ ಒಂದೇ ನಾಮ ಹಲವು ಎನ್ನುವುದು ಎಲ್ಲರ ನಂಬಿಕೆ. ಕಾಲೇ ಕಂಬ, ದೇಹವೇ ದೇಗುಲ, ಶಿರವೇ ಹೊನ್ನ ಕಲಶ ಎಂದು ಬಸವಾದಿ ಶರಣರು ಹೇಳಿದ್ದು ಈ ಕಾರಣಕ್ಕಾಗಿಯೇ ಎನ್ನುತ್ತಾ, ದೇವರಿಲ್ಲದ ಜಾಗವೇ ಇಲ್ಲ ಎನ್ನುವ ಸಂದೇಶವನ್ನು ಸಾರಿದ ಕನಕದಾಸರ ಬಾಳೆಹಣ್ಣಿನ ಕತೆಯನ್ನು ವಿವರಿಸಿದರು. ಅಂಬೇಡ್ಕರ್ ಅವರು ಸಂವಿಧಾನ ಅಂಗೀಕಾರ ಸಭೆಯಲ್ಲಿ ಮಾಡಿದ ಭಾಷಣವನ್ನು ಪ್ರತಿಯೊಬ್ಬರೂ ಓದಿಕೊಳ್ಳಬೇಕು. ಸಂವಿಧಾನದ ಹಕ್ಕು ಮತ್ತು ಕರ್ತವ್ಯಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದು ಕರೆ ನೀಡಿದರು.

ಕ್ರೈಸ್ತ ಧರ್ಮದ ಮಹಾನ್ ಧರ್ಮಗುರು ಪೀಟರ್ ಮಚಾಡೋ, ಸಚಿವರಾದ ಕೆ.ಜೆ. ಜಾರ್ಜ್, ಕೆಕೆಆರ್ ಡಿಬಿ ಅಧ್ಯಕ್ಷರಾದ ಅಜಯ್ ಸಿಂಗ್, ಶಸಕರಾದ ಭರತ್ ರೆಡ್ಡಿ, ನಾಗೇಂದ್ರ, ಅನ್ನಪೂರ್ಣ ತುಕಾರಾಮ್ ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.

### ರಾಜಮನೆ ಗ್ರೂಪ್ಸ್ ಪ್ರಾರಂಭೋತ್ಸವದಲ್ಲಿ ಸಚಿವ ಸತೀಶ್, ಶಾಸಕ ಟಿ.ರಘುಮೂರ್ತಿ

ಬೆಂಗಳೂರು:ಚಳ್ಳಕೆರೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅವರು ಬೆಂಗಳೂರಿನಲ್ಲಿ ನಡೆದ ರಾಜಮನೆ ಗ್ರೂಪ್ಸ್ ನ ಪ್ರಾರಂಭೋತ್ಸವ ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ, ಶಾಸಕರುಗಳಾದ ಎನ್.ಟಿ.ಶ್ರೀನಿವಾಸ್, ರಾಘವೇಂದ್ರ ಹಿಟ್ನಾಳ್, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ರವರು, ಮಾಲೀಕರಾದ ಸನ್ನಿ ಆರ್ ರಾಜಮನೆ ಮತ್ತು ಫೌಂಡೇಶನ್ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.





## ಪ್ರಮುಖ ಸುದ್ದಿ

**ಸರ್ಕಾರದ ಬಾಲಮಂದಿರಗಳಿಗೆ ಜಿ.ಪಂ. ಸಿಇಒ ಸೋಮಶೇಖರ್ ಭೇಟಿ**

# ಮಕ್ಕಳಿಗೆ ಗುಣಮಟ್ಟದ ಸೌಲಭ್ಯ ಒದಗಿಸಲು ತಾಕೀತು

» ಚಿತ್ರದುರ್ಗ



ಚಿತ್ರದುರ್ಗ ನಗರದಲ್ಲಿರುವ ಬಾಲಕರ ಹಾಗೂ ಬಾಲಕಿಯರ ಸರ್ಕಾರಿ ಬಾಲ ಮಂದಿರಗಳಿಗೆ ಮಂಗಳವಾರದಂದು ಭೇಟಿ ನೀಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು, ಬಾಲಮಂದಿರದಲ್ಲಿನ ಮಕ್ಕಳಿಗೆ ಉತ್ತಮ ಗುಣಮಟ್ಟದ ಸೌಲಭ್ಯಗಳನ್ನು ಒದಗಿಸುವಂತೆ ತಾಕೀತು ಮಾಡಿದರು.

ಬಾಲಕರ ಸರ್ಕಾರಿ ಬಾಲಮಂದಿರದಲ್ಲಿ ಒಟ್ಟು 30 ಹಾಗೂ ಬಾಲಕಿಯರ ಬಾಲಮಂದಿರದಲ್ಲಿ 29 ಮಕ್ಕಳು ದಾಖಲಾಗಿರುವ ಬಗ್ಗೆ ಮಾಹಿತಿ ಪಡೆದು, ಸಂಕಷ್ಟದಲ್ಲಿರುವ ಮಕ್ಕಳ ಪೋಷಣೆ ಮತ್ತು ರಕ್ಷಣೆಯ ಅವಶ್ಯಕತೆ ಇರುವ ಮಕ್ಕಳಿಗೆ ಉಚಿತವಾಗಿ ತುರ್ತು ಸೇವೆ ಒದಗಿಸುವ ಸಲುವಾಗಿ ಸರ್ಕಾರ ಬಾಲಮಂದಿರಗಳನ್ನು ಸ್ಥಾಪಿಸಿದೆ. ಇಲ್ಲಿ ದಾಖಲಾಗುವ ಮಕ್ಕಳಿಗೆ ಉತ್ತಮ ಆಪ್ತ ಸಮಾಲೋಚನೆ ನಡೆಸುವುದರ ಮೂಲಕ ಮಾನಸಿಕವಾಗಿ ಸ್ಥೈರ್ಯ ತುಂಬುವ ಕಾರ್ಯವನ್ನು ಸಿಬ್ಬಂದಿಗಳು ನಿರ್ವಹಿಸಬೇಕು. ಮಕ್ಕಳಿಗೆ ಉತ್ತಮ ಊಟೋಪಹಾರ, ಕಾಲಕಾಲಕ್ಕೆ ಅಗತ್ಯ ವೈದ್ಯಕೀಯ ನೆರವು ಜೊತೆಗೆ ಉತ್ತಮ ವಿದ್ಯಾಭ್ಯಾಸಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಸೂಚನೆ ನೀಡಿದರು.

ಬಾಲಮಂದಿರದಲ್ಲಿನ ಮಕ್ಕಳ ಹಾಜರಾತಿ ವಿವರವನ್ನು ಪರಿಶೀಲಿಸಿ, ಬಾಲ ಮಂದಿರದ ವಸತಿ ಕೊಠಡಿಗಳಿಗೆ ತೆರಳಿ ಸೌಲಭ್ಯಗಳ ಬಗ್ಗೆ ವೀಕ್ಷಣೆ ನಡೆಸಿದರು. ಅಡುಗೆ ತಯಾರಿಕೆ ಕೊಠಡಿ ತೆರಳಿ, ಮಕ್ಕಳಿಗೆ ನೀಡಲಾಗುವ ಊಟೋಪಹಾರದ ಮೆನು, ಹಾಗೂ ತಯಾರಿಸಲಾಗಿದ್ದ ಅಡುಗೆಯನ್ನು ಪರಿಶೀಲಿಸಿದರು. ಶುದ್ಧ ಕುಡಿಯುವ ನೀರು, ಆಹಾರ ಗುಣಮಟ್ಟ, ವಿತರಣೆ ಹಾಗೂ ಸ್ವಚ್ಛತೆಯ ಬಗ್ಗೆ ಸಿಬ್ಬಂದಿಗೆ ಸಲಹೆ, ಸೂಚನೆಗಳನ್ನು ನೀಡಿದರು.

ಶೈಕ್ಷಣಿಕ ಪ್ರಗತಿಯ ಬಗ್ಗೆ ಮಕ್ಕಳು ಹಾಗೂ ಸಿಬ್ಬಂದಿಯವರೊಂದಿಗೆ ಸಂವಾದ ನಡೆಸಿದ ಸಿಇಒ ಅವರು. ತದನಂತರ ಎಲ್ಲ ಮಕ್ಕಳ ಆರೋಗ್ಯದ ಬಗ್ಗೆ ವಿಚಾರಿಸಿದರು. ಪ್ರತಿ ತಿಂಗಳು ವೈದ್ಯರ ಬಳಿ ಮಕ್ಕಳು ತಪಾಸಣೆ ಮಾಡಿಸಿಕೊಳ್ಳುತ್ತಿರುವ ಬಗ್ಗೆ ಚರ್ಚಿಸಿ, ಮಕ್ಕಳ ಆರೋಗ್ಯ ಮತ್ತು ಆರೈಕೆಗಳ ಬಗ್ಗೆ ಕೆಲವು ಸಲಹೆಗಳನ್ನು ನೀಡಿದರು. ಸಂವಾದ ಸಂದರ್ಭದಲ್ಲಿ ಮಕ್ಕಳ ಅಗತ್ಯತೆ ಬಗ್ಗೆ ಕೇಳಿದಾಗ, ಮಕ್ಕಳು ತಮಗೆ ಒಳಾಂಗಣದಲ್ಲಿ ಆಡಬಹುದಾದ ಚೆಸ್, ಕೇರಂ ಮುಂತಾದ ಆಟದ ಸಾಮಗ್ರಿಗಳನ್ನು ಒದಗಿಸುವಂತೆ ಕೋರಿದರು. ಅಲ್ಲದೆ ಮೈಸೂರಿನಲ್ಲಿನ ಅರಮನೆ, ಮೃಗಾಲಯ ಮತ್ತಿತರ ಪ್ರವಾಸಿ ತಾಣಗಳನ್ನು ವೀಕ್ಷಿಸುವ ಆಸೆಯನ್ನು ಇದೇ ಸಂದರ್ಭದಲ್ಲಿ ಮಕ್ಕಳು ವ್ಯಕ್ತಪಡಿಸಿದರು. ಇದಕ್ಕೆ ಕೂಡಲೆ ಸ್ಪಂದಿಸಿದ ಸಿಇಒ ಅವರು, ಶೀಘ್ರವೇ ಮಕ್ಕಳ ಆಶಯವನ್ನು ಈಡೇರಿಸುವ ಭರವಸೆ ನೀಡಿದರು. ಇದರ ಜೊತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣಕ್ಕಾಗಿ ಲ್ಯಾಪ್‌ಟಾಪ್‌ಗಳನ್ನು ಪೂರೈಸುವುದಾಗಿಯೂ ಭರವಸೆ ನೀಡಿದರು.ಸಂಕಷ್ಟದಲ್ಲಿರುವ ಮಕ್ಕಳನ್ನು ರಕ್ಷಿಸುವ ನಿಟ್ಟಿನಲ್ಲಿ ಉಚಿತ ಸಹಾಯವಾಣಿ 1098 ಕುರಿತು ವ್ಯಾಪಕವಾಗಿ ಪ್ರಚಾರ ಕೈಗೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಮಕ್ಕಳ ಶಿಕ್ಷಣಾಧಿಕಾರಿ ಸವಿತಾ, ಜಿಲ್ಲಾ ಮಕ್ಕಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಹಾಯಕ ಅಧಿಕಾರಿ ಪವಿತ್ರ, ಬಾಲಕರ ಸರ್ಕಾರಿ ಬಾಲ ಮಂದಿರದ ಅಧೀಕ್ಷಕ ಜಿ. ವಿ. ಸಂತೋಷ, ಬಾಲಕಿಯರ ಬಾಲ ಮಂದಿರದ ಅಧೀಕ್ಷಕಿಯರಾದ ಜ್ಯೋತಿ ಹಾಗೂ ಕಾವೇರಮ್ಮ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬ್ಲಾಕ್ ಕೋ ಅಡಿನೇಟರ್ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ರಾಷ್ಟ್ರೀಯ ಪೋಷಣ್ ಅಭಿಯಾನ್ (ಪೋಷಣ್ 2.0) ಯೋಜನೆಯಡಿ ನೇರಗುತ್ತಿಗೆ ಆಧಾರದ ಮೇಲೆ ಹೊನ್ನಾಳಿಯಲ್ಲಿ ಖಾಲಿ ಇರುವ ಬ್ಲಾಕ್ ಕೋ ಅರ್ಡಿನೇಟರ್ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ.ಬಿ ಬ್ಲಾಕ್, ಕುವೆಂಪು ನಗರ ದಾವಣಗೆರೆ ದೂ.ಸಂ:08192-264056 ಇಲ್ಲಿಗೆ ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್ 9 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

### ಆಸ್ತಿ ತೆರಿಗೆ, ನೀರಿನ ಶುಲ್ಕ ವಸೂಲಾತಿಗೆ ಮಹಿಳಾ ಸ್ವಸಹಾಯ ಸಂಘಗಳಿಂದ ಅರ್ಜಿ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ಡೇ-ನಲ್ಮ್ ಅಭಿಯಾನದಡಿ ಮಹಿಳಾ ಸ್ವ-ಸಹಾಯ ಗುಂಪು (ಎಸ್‌ಹೆಚ್‌ಜಿ) ಗಳ ಸದಸ್ಯರ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಡೇ-ನಲ್ಮ್ ನೊಂದಿಗೆ ನೋಂದಾಯಿಸಿಕೊಂಡ ಆಸಕ್ತ ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು ಡೇ-ನಲ್ಮ್ ಹಿಂಬರಹದೊಂದಿಗೆ www.davanagerecity.mrc.gov.in ವೆಬ್‌ಸೈಟ್‌ನಲ್ಲಿ ನಿಗಧಿತ ನಮೂನೆಯಲ್ಲಿ ಡಿಸೆಂಬರ್ 26 ರೊಳಗಾಗಿ ಮಹಾನಗರಪಾಲಿಕೆ ಕಚೇರಿಗೆ ಸಲ್ಲಿಸಬೇಕು. ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳು ಹೊಂದಿರಬೇಕಾದ ಅರ್ಹತಾ ಮಾನದಂಡ:- ಗುರುತಿನ ಮತ್ತು ವಿಳಾಸದ ದಾಖಲೆಗಳಾದ ಆಧಾರ್ ಕಾರ್ಡ್, ವೋಟರ್‌ಐಡಿ, ರೇಷನ್‌ಕಾರ್ಡ್, ಪಾನ್ ಕಾರ್ಡ್ ನಕಲು ಪ್ರತಿ, ಮಹಿಳಾ ಸ್ವ-ಸಹಾಯ ಸಂಘದವರು ಅನುಬಂಧ-1ರಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಮಹಿಳಾ ಸ್ವ-ಸಹಾಯ ಸಂಘದ ವಿವರವನ್ನು ಅನುಬಂಧ-2 ರಲ್ಲಿ, ಮಹಿಳಾ ಸ್ವ-ಸಹಾಯ ಸಂಘದ ಆರ್ಥಿಕ ವಿವರವನ್ನು ಅನುಬಂಧ-3 ರಲ್ಲಿ, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರ ವಿದ್ಯಾರ್ಹತೆ ವಿವರವನ್ನು ಅನುಬಂಧ-4 ರಲ್ಲಿ, ಕನಿಷ್ಠ 7ನೇ ತರಗತಿ ಉತ್ತೀರ್ಣರಾಗಿರುವ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿ.ಸಿ) ಯನ್ನು ಶಾಲೆಯ ಮುಖ್ಯ ಶಿಕ್ಷಕರಿಂದ ದೃಢೀಕರಿಸಿದ ಪ್ರತಿ, ಅಪರಾಧ, ಸಮಾಜ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿಲ್ಲ ಎಂಬುದರ ಬಗ್ಗೆ ಸ್ಪಷ್ಟಿಕರಣವನ್ನು ಅನುಬಂಧ-5 ರಲ್ಲಿ, ಮಹಿಳಾ ಸ್ವ-ಸಹಾಯ ಸಂಘದ ದೃಢೀಕರಣವನ್ನು ಅನುಬಂಧ-6 ರಲ್ಲಿ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ದಾವಣಗೆರೆ ಮಹಾನಗರ ಪಾಲಿಕೆ ಹಾಗೂ ವಿವಿಧ ಕನ್ನಡಪರ ಸಂಘಟನೆಗಳಿಂದ 69 ನೇ ಕನ್ನಡ ರಾಜ್ಯೋತ್ಸವ

» ದಾವಣಗೆರೆ

ದಾವಣಗೆರೆ ಮಹಾನಗರ ಪಾಲಿಕೆ ಹಾಗೂ ಕನ್ನಡಪರ ಸಂಘ, ಸಂಸ್ಥೆಗಳು ಮತ್ತು ಪತ್ರಕರ್ತರ ಸಂಯುಕ್ತಾಶ್ರಯದಲ್ಲಿ ನವೆಂಬರ್ 28 ರಿಂದ 30 ರ ವರೆಗೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪಾಲಿಕೆ ಆವರಣದಲ್ಲಿನ ಶ್ರೀಮತಿ ರಾಧಮ್ಮ ಚನ್ನಗಿರಿ ರಂಗಪ್ಪ ಸ್ಮಾರಕ ರಂಗಮಂದಿರದಲ್ಲಿ ನ.28 ರಂದು ಬೆಳಗ್ಗೆ 9.30 ಕ್ಕೆ ಕನ್ನಡ ಧ್ವಜಾರೋಹಣ ಮತ್ತು ಭುವನೇಶ್ವರಿ ದೇವಿಯ ಮೆರವಣಿಗೆ ನಡೆಯಲಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಉದ್ಘಾಟಿಸುವರು. ಸಾಹಿತಿ ಕುಂ.ವೀರಭದ್ರಪ್ಪ ಉಪಸ್ಥಿತರಿರುವರು. ಸಂಜೆ 5.30 ಕ್ಕೆ ರಾಜ್ಯೋತ್ಸವ ವೇದಿಕೆ ಕಾರ್ಯಕ್ರಮಗಳು ನಡೆಯಲಿವೆ. ನ.29 ರಂದು ಸಂಜೆ 5.30 ಕ್ಕೆ ನಡೆಯುವ ವೇದಿಕೆ ಕಾರ್ಯಕ್ರಮವನ್ನು ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸುವರು. ನ.30 ರಂದು ಸಂಜೆ 5.30 ಕ್ಕೆ ನಡೆಯುವ ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಶಿವಗಂಗಾ ಬಸವರಾಜ್, ಕೆ.ಎಸ್.ಬಸವಂತಪ್ಪ, ಮೇಯರ್ ಚಮನ್‌ಸಾಬ್ ಕೆ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಎಂ.ಗೌಡ, ಕೆ.ಅಬ್ದುಲ್ ಜಬ್ಬಾರ್, ಡಿ.ಟಿ.ಶ್ರೀನಿವಾಸ್, ದೂಡಾ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಉಪ ಮೇಯರ್ ಸೋಗಿ ಶಾಂತಕುಮಾರ್, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೇರಿದಂತೆ ಪಾಲಿಕೆ ಸ್ಥಾಯಿ ಸಮಿತಿ ಅಧ್ಯಕ್ಷರು, ಪಾಲಿಕೆ ಸದಸ್ಯರು, ಸಾಹಿತಿಗಳು, ಕಲಾವಿದರು, ಪತ್ರಕರ್ತರು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಧಕರಿಗೆ ಸನ್ಮಾನ ಕಾರ್ಯಕ್ರಮಗಳು ನಡೆಯಲಿವೆ ಎಂದು ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

**ಜಿಲ್ಲಾ ಗಣಿ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ**

# ನಿಯಮ-3ಎ ಉಲ್ಲಂಘನೆ ಕಠಿಣ ಕ್ರಮಕ್ಕೆ ಶಿಫಾರಸ್ಸು

» ಚಿತ್ರದುರ್ಗ



ಜಮೀನು ಸಮತಟ್ಟುಗೊಳಿಸಿ ಕೃಷಿಯೋಗ್ಯ ಭೂಮಿಯನ್ನಾಗಿಸಲು, ಜಮೀನಿನಲ್ಲಿರುವ ಹೆಚ್ಚುವರಿ ಉಪ ಖನಿಜಗಳನ್ನು ತೆರವುಗೊಳಿಸಿ ಸಾಗಾಣಿಕೆ ಮಾಡಲು, ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಾವಳಿ-1994ರ ನಿಯಮ-3ಎ ಅಡಿ ನೀಡಿದ ಅನುಮತಿಯನ್ನು ಉಲ್ಲಂಘಿಸಿ, ಅಕ್ರಮವಾಗಿ ಗಣಿಕಾರಿಕೆ ಮಾಡುವವರ ವಿರುದ್ಧ ಕಠಿಣ ಕ್ರಮಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಬುಧವಾರ ಗಣಿಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಯಮ-3ಎ ಅಡಿಯಲ್ಲಿ ಅನುಮತಿ ನೀಡುವಾಗ, ಜಮೀನು ಮಾಲಿಕರಿಗೆ ಷರತ್ತು ನಿಯಮಗಳನ್ನು ವಿಧಿಸಲಾಗಿರುತ್ತದೆ. ಆದರೆ ಕೆಲವು ಭಾಗದಲ್ಲಿ ನಿಯಮ ಉಲ್ಲಂಘಿಸಿ ಜಮೀನುಗಳಿಂದ ಹೆಚ್ಚುವರಿಯಾಗಿ ಉಪ ಖನಿಜಗಳನ್ನು ಗಣಿಗಾರಿಕೆ ಮಾಡಲಾಗಿದೆ. ಇದರಿಂದ ಕೃಷಿ ಭೂಮಿ ಹಾಳಾಗುವುದರ ಜೊತೆಗೆ ಪರಿಸರಕ್ಕೆ ಮಾರಕವಾಗುತ್ತದೆ. ಜೊತೆಗೆ ಸರ್ಕಾರದ ರಾಜಸ್ವ ಸಂಗ್ರಹಣೆಗೂ ಧಕ್ಕೆ ಉಂಟಾಗುತ್ತದೆ. ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಕಂಡುಬಂದರೆ, ಸಂಬಂಧಪಟ್ಟ ತಹಶೀಲ್ದಾರ್, ಉಪವಿಭಾಗಾಧಿಕಾರಿ ಹಾಗೂ ಕೃಷಿ ಇಲಾಖೆ ಅಧಿಕಾರಿಗಳಿಂದ ವರದಿ ಪಡೆದು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

**ಅಕ್ರಮ ಕಲ್ಲು ಗಣಿಗಾರಿಕೆ ದೂರು : ಡ್ರೋಣ್ ಸರ್ವೆಗೆ ಸೂಚನೆ**

ಜಿಲ್ಲೆಯಲ್ಲಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸಿದ ಬಗ್ಗೆ ಕೇಳಿಬಂದ ದೂರುಗಳನ್ನು ಪರಿಶೀಲಿಸಲು, ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಉಪ ಸಮಿತಿ ರಚನೆ ಮಾಡಲಾಗಿದೆ. ದೂರುದಾರ ಸಮ್ಮುಖದಲ್ಲೇ ಕಲ್ಲು ಕ್ವಾರಿಗಳ ಡ್ರೋಣ್ ಸರ್ವೆ ನಡೆಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಕಲ್ಲು ಗಣಿಗಾರಿಕೆ ನಡೆಸಲು ಅನುಮತಿ ನೀಡಿದ ಅವಧಿಯಲ್ಲಿ, ಎಷ್ಟು ವಿಸ್ತೀರ್ಣ ಪ್ರದೇಶಕ್ಕೆ ಅನುಮತಿ ನೀಡಲಾಗಿತ್ತು. ಎಷ್ಟು ಪ್ರಮಾಣದ ಕಲ್ಲು ಗಣಿಗಾರಿಕೆ ನಡೆಸಲಾಗಿದೆ. ರಾಷ್ಟ್ರೀಯ ಹೆದ್ದಾರಿ 150ಎ ನಿರ್ಮಾಣಕ್ಕೆ ಎಷ್ಟು ಪ್ರಮಾಣದ ಕಲ್ಲನ್ನು ಪುಡಿ ಮಾಡಿ ಉಪಯೋಗಿಸಲಾಗಿದೆ ಎಂಬುದರ ಬಗ್ಗೆ ಪರಿಶೀಲನೆ ನಡೆಸಬೇಕು. ಈ ಎಲ್ಲಾ ಅಂಶಗಳು ಒಂದಕ್ಕೊಂದು ತಾಳೆಯಾಗಬೇಕು. ಒಂದು ವೇಳೆ ಹೆಚ್ಚುವರಿ ಗಣಿಗಾರಿಕೆ ನಡೆದಿರುವುದು ಕಂಡುಬಂದರೆ, ಅಂತಹವರ ವಿರುದ್ಧ ಗಣಿ ನಿಯಮಾನುಸಾರ ದೂರು ದಾಖಲಿಸುವಂತೆ ಜಿಲ್ಲಾಧಿಕಾರಿ ಹೇಳಿದರು. ಅಕ್ರಮ ಗಣಿಗಾರಿಕೆ, ಅದಿರು ಹಾಗೂ ಖನಿಜಗಳ ಸಾಗಾಣಿಕೆ ಬಗ್ಗೆ ಸಾರ್ವಜನಿಕರು ಸಲ್ಲಿಸಿದ ದೂರಗಳಿಗೆ ಅಧಿಕಾರಿಗಳು ಕಾಲಮಿತಿಯಲ್ಲಿ ಸೂಕ್ತ ಉತ್ತರ ಅಥವಾ ಹಿಂಬರಹವನ್ನು ನೀಡಬೇಕು. ದೂರಗಳ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿರ್ದೇಶಿಸಿದರು.

**20 ವರ್ಷ ಮೇಲ್ಪಟ್ಟ ವಾಹನಗಳಿಗೆ ಬ್ರೇಕ್:** ಗ್ರಾಮೀಣ ಭಾಗದಲ್ಲಿ ಅದಿರು ಹಾಗೂ ಖನಿಜಗಳನ್ನು ಸಾಗಣೆ ಮಾಡುವ ವಾಹನಗಳನ್ನು ತಪಾಸಣೆ ಮಾಡಬೇಕು. 20 ವರ್ಷ ಮೇಲ್ಪಟ್ಟ ವಾಹನಗಳ ಎಫ್.ಸಿ ನವೀಕರಣಗೊಳಿಸಬಾರದು, ಅಂತಹ ವಾಹನಗಳು ಕಾರ್ಯಾಚರಣೆ ಮಾಡುತ್ತಿದ್ದಲ್ಲಿ ಅವುಗಳ ಸಂಚಾರಕ್ಕೆ ತಡೆ ಒಡ್ಡಬೇಕು. ಅನುಮತಿಸಿದ ತೂಕಕ್ಕಿಂತ ಹೆಚ್ಚಿನ ಅದಿರು ಸಾಗಾಟ ಮಾಡುವ ವಾಹನಗಳನ್ನು ತಡೆದು, ದಂಡ ವಿಧಿಸಬೇಕು. ಅದಿರನ್ನುವಶಪಡಿಸಿಕೊಂಡು ವಾಹನ ಜಪ್ತಿ ಮಾಡುವಂತೆ ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಜಿಲ್ಲೆಯಲ್ಲಿ 335ಕ್ಕೂ ಹೆಚ್ಚು ಅದಿರು ಸಾಗಾಣಿಕೆಯ ಭಾರಿ ವಾಹನಗಳು ಇದ್ದು, ಇದರಲ್ಲಿ 18 ವಾಹನಗಳು 20 ವರ್ಷ ಪೂರೈಸಿವೆ. 268 ವಾಹನಗಳು 15 ವರ್ಷ ಪೂರೈಸಿವೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೆ ಸಿಂಘೆ ಸಭೆಯಲ್ಲಿ ಮಾಹಿತಿ ನೀಡದರು.

**ಕ್ರಷರ್‌ಗಳ ನಿಯಮ ಪಾಲನೆ ಮಾಡಲಿ:** ಕಲ್ಲು ಪುಡಿ ಮಾಡುವ ಘಟಕ (ಕ್ರಷರ್) ಗಳು ಪಾಲನೆ ಮಾಡಬೇಕಾದ ನಿಯಮಗಳ ಬಗ್ಗೆ ಕರ್ನಾಟಕ ಕಲ್ಲು ಪುಡಿ ಮಾಡುವ ಘಟಗಳ ನಿಯಂತ್ರಣ ಅಧಿನಿಯ -2011 ಹಾಗೂ ತಿದ್ದುಪಡಿ ಕಾಯ್ದೆ 2013ರಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ. ಆದರೂ ಜಿಲ್ಲೆಯಲ್ಲಿ ಹಲವು ಕ್ರಷರ್‌ಗಳಲ್ಲಿ ಈ ನಿಯಮಗಳನ್ನು ಪಾಲನೆ ಮಾಡುತ್ತಿಲ್ಲ. ಕಲ್ಲು ದೂಳು, ಬೆಳೆಗಳ ಮೇಲೆ ಬಿದ್ದು, ಇಳುವರಿ ಕಡಿಮೆಯಾಗುತ್ತಿದೆ ಎಂದು ರೈತರು ದೂರು ನೀಡಿದ್ದಾರೆ. ಇದರ ಜೊತೆಗೆ ಕ್ರಷರ್‌ಗಳ ಸುತ್ತ ಮುತ್ತಲಿನ ಪ್ರದೇಶದಲ್ಲಿ ವಾಸಿಸುವ ಜನರು ಶ್ವಾಸಕೋಶ ಸಂಬಂಧಿಸಿದ ಖಾಯಿಲೆಗಳಿಗೆ ತುತ್ತಾಗುತಿದ್ದಾರೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕಾರ್ಯಚರಣೆ ನಡೆಸುತ್ತಿರುವ ಎಲ್ಲ 29 ಕ್ರಷರ್‌ಗಳ ಪರಿಶೀಲನೆ ಮಾಡಿ, ಪರಿಸರ ಮಾಲಿನ್ಯವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಸಭೆಯಲ್ಲಿ ಹೇಳಿದರು. ಇದೆ ವೇಳೆ, ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಾವಳಿ-1994ರ ನಿಯಮ 32ರ ಅನ್ವಯ ಅಲಂಕಾರಿಕ ಶಿಲೆ, ಕಟ್ಟಡ ಕಲ್ಲು, ವೈಟ್ ಕ್ವಾಟ್ಜ್‌ಗಳ ಗಣಿಗಾರಿಕೆಗೆ ಮಂಜೂರಾತಿ ನೀಡುವ ಕುರಿತು ಹಾಗೂ ಮರಳು ಗಣಿ ಗುತ್ತಿಗೆ ಮಂಜೂರಾತಿ ಕೋರಿ ಸ್ವೀಕೃತವಾದ ಅರ್ಜಿಗಳ ಕುರಿತು ಚರ್ಚಿಸಲಾಯಿತು.

ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಿಕ್ಷಕರ ವೃತ್ತಿ ಕಲುಷಿತಗೊಂಡಿದೆ: ಎಂಸಿಆರ್

» ಚಿತ್ರದುರ್ಗ



ಶಿಕ್ಷಕರ ವೃತ್ತಿ ಕಲುಷಿತಗೊಂಡಿದೆ. ಮೇಷ್ಟ್ರುಗಳು ರಾಜಕಾರಣ ಮಾಡುತ್ತ ದೇಶ ಹಾಳು ಮಾಡುತ್ತಿದ್ದಾರೆಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಹೇಳಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಬಿ.ಇ.ಡಿ. ನಾಲ್ಕನೆ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಬುಧವಾರ ಏರ್ಪಡಿಸಲಾಗಿದ್ದ ನೆನಪಿನ ಹೆಜ್ಜೆಗಳು ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಉಪಕಾರ ಸ್ಮರಣೆ ಇಂದಿನ ಪೀಳಿಗೆಯಲ್ಲಿ ಕಡಿಮೆಯಾಗಿದೆ. ಗುರಿ, ಆಸೆ, ಆಕಾಂಕ್ಷೆ, ದುರಾಸೆ, ಚಟ ಪ್ರತಿಯೊಬ್ಬರಲ್ಲಿಯೂ ಇರುತ್ತದೆ. ಸೃಷ್ಠಿಯನ್ನು ನಂಬಬೇಕು. ಸೃಷ್ಟಿಯ ವಿರುದ್ದ ಯಾರು ಹೋಗಬಾರದು. ಕಠಿಣ ಪರಿಶ್ರಮದಿಂದ ಮಾತ್ರ ಜೀವನದಲ್ಲಿ ಯಶಸ್ಸು ಸಾಧ್ಯ. ಉಪಕಾರವನ್ನು ಮಾಡಿದವರನ್ನು ಮರೆತರೆ ಅಂತಹ ಮನುಷ್ಯ ಏಳಿಗೆಯಾಗುವುದಿಲ್ಲ ಎಂದು ತಿಳಿಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಬೆಳೆದಿರುವುದು ಬಿ.ಇ.ಡಿ. ಕಾಲೇಜಿನಿಂದ ಜೀವನದಲ್ಲಿ ಯಶಸ್ವಿಯಾದವರಿಗೆ ಬದುಕುವ ಹಕ್ಕಿದೆ. ಪ್ರತಿದಿನ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಬೇಕೆಂದು ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳಿಗೆ ಎಂ.ಸಿ. ರಘುಚಂದನ್ ಕರೆ ನೀಡಿದರು. ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಜಿ.ಇ.ಭೈರಸಿದ್ದಪ್ಪ ಮಾತನಾಡಿ ಶಿಕ್ಷಣವೆಂದರೆ ಸ್ಪರ್ಧೆ. ಪ್ರತಿಯೊಂದು ರಂಗದಲ್ಲಿಯೂ ಪೈಪೋಟಿರುವುದರಿಂದ ವಿದ್ಯಾರ್ಥಿಗಳಲ್ಲಿ ಸ್ಪಷ್ಟವಾದ ಗುರಿ, ನಿಖರತೆಯಿರಬೇಕು. ತರಬೇತಿಯಿಂದ ಪರಿಪೂರ್ಣ ವ್ಯಕ್ತಿತ್ವ ನಿಮ್ಮದಾಗುತ್ತದೆ. ಬಿ.ಇ.ಡಿ. ಶಿಕ್ಷಣದಲ್ಲಿ ವೈವಿದ್ಯಮಯ ಚಟುವಟಿಕೆಯಿರುತ್ತದೆ. ಪ್ರಶಿಕ್ಷಣಾರ್ಥಿಗಳಾಗಿರುವ ಸಂದರ್ಭದಲ್ಲಿ ಕಠಿಣವಿರುತ್ತದೆ. ತಾಳ್ಮೆಯಿಂದ ಇರಬೇಕು ಎಂದರು.

ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಬಿ.ಸಿ.ಅನಂತರಾಮು, ಸಹಾಯಕ ಪ್ರಾಧ್ಯಾಪಕರುಗಳಾದ ಡಾ.ಕೆ.ಪಿ.ನಾಗಭೂಷಣ್‌ಶೆಟ್ಟಿ, ಆರ್.ಎಸ್. ರಾಜು, ಡಾ.ಜಿ.ಬಿ.ರಾಜಪ್ಪ, ವಿ.ಪ್ರಕಾಶ್, ಡಾ.ಬಿ.ಚಂದ್ರಪ್ಪ ಇವರುಗಳು ವೇದಿಕೆಯಲ್ಲಿದ್ದರು. ಗ್ರಂಥಪಾಲಕ ಸಿ.ಬಸವರಾಜು, ಸಹಾಯಕ ಪ್ರಾಧ್ಯಾಪಕ ಡಾ.ಲಿಂಗರಾಜ್ ಹಂಚಿನಮನಿ ಹಾಗೂ ಬಿ.ಇ.ಡಿ.ವಿದ್ಯಾರ್ಥಿಗಳು ಬೀಳ್ಕೊಡುಗೆ ಸಮಾರಂಭದಲ್ಲಿ ಹಾಜರಿದ್ದರು.

## ನಗರಸಭೆ ವತಿಯಿಂದ ಇ-ಸ್ವತ್ತು ವಿಶೇಷ ಅಂದೋಲನ



» ಚಳ್ಳಕೆರೆ

ನಗರಸಭೆಯ ಆಡಳಿತದವತಿಯಿಂದ ಸರ್ಕಾರದ ನಿರ್ದೇಶನ ಮೇರೆಗೆ ಇ-ಖಾತೆ ಕುರಿತಂತೆ ವಿಶೇಷ ಅಂದೋಲನ ನ.25ರಿಂದ ಡಿ.24ರ ತನಕ ನಡೆಯಲಿದೆ ಎಂದು ಕಂದಾಯಾಧಿಕಾರಿ ಸತೀಶ್ ತಿಳಿಸಿದ್ದಾರೆ.

ಅವರು, ನಗರದ ಹಳೇಟೌನ್‌ನ ಮೂರನೇ ವಾರ್ಡ್‌ನಲ್ಲಿ ಇ-ಸ್ವತ್ತು ಅಂದೋಲನದ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ನಿಮ್ಮ ಖಾತೆಗಳ ಇ-ಸ್ವತ್ತು ಕುರಿತಂತೆ ಕಂದಾಯ ಪಾವತಿಸಿ ದಾಖಲಾತಿ ಪಡೆಯಲು ಸಾರ್ವಜನಿಕರು ಪ್ರತಿನಿತ್ಯ ನಗರಸಭೆ ಕಚೇರಿಗೆ ಓಡಾಡಬೇಕಿತ್ತು. ಇದರಿಂದ ಸಾರ್ವಜನಿಕರಿಗೆ ಹಾಗೂ ಅಧಿಕಾರಿಗಳಿಗೆ ಹೆಚ್ಚು ಸಮಸ್ಯೆ ಆಗುತ್ತಿದ್ದು, ನಗರಸಭೆ ಆಡಳಿತವೇ ನಗರ ವ್ಯಾಪ್ತಿಯ 31 ವಾರ್ಡ್‌ಗಳಲ್ಲೂ ಅಂದೋಲನದ ಮೂಲಕ ಇ-ಸ್ವತ್ತು ದಾಖಲೆಗಳನ್ನು ನೀಡಲು ಸಿದ್ದವಿದ್ದು, ಈಗಾಗಲೇ ಪ್ರತಿವಾರ್ಡ್‌ಗೆ ತೆರಳಿ ದಾಖಲಾತಿ ಪರಿಶೀಲಿಸಿ ಇ-ಸ್ವತ್ತು ವಿತರಣೆಯ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ. ಸಾರ್ವಜನಿಕರು ಈ ಅಂದೋಲನವನ್ನು ಸದುಪಯೋಗ ಪಡೆಸಿಕೊಳ್ಳುವಂತೆ ಕರೆ ನೀಡಿದರು. ಈ ಸಂದರ್ಭದಲ್ಲಿ ಅಧಿಕಾರಿಗಳಾದ ರಾಜೇಶ್, ವೀರಭದ್ರಿ, ಓಬಯ್ಯ, ಮಂಜುನಾಥ, ಸುಧಾಕರ ಮುಂತಾದವರು ಇದ್ದರು. ಬಜೆಟ್ ಪೂರ್ವಭಾವಿ ಸಭೆ :- ಪ್ರತಿವರ್ಷದಂತೆ ಈ ವರ್ಷವೂ ನಗರಸಭೆ ಆಡಳಿತ 2025-26ನೇ ಸಾಲಿನ ಆಯವ್ಯಯ ಸಿದ್ದಪಡಿಸುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಸಲಹೆ ಸೂಚನೆಗಳನ್ನು ಆಹ್ವಾನಿಸಿದ್ದು, ನ.29ರ ಶುಕ್ರವಾರ ಬೆಳಗ್ಗೆ 11 ಗಂಟೆಗೆ ನಗರಸಭೆ ಸಭಾಂಗಣದಲ್ಲಿ ಬಜೆಟ್ ಸಿದ್ದತೆಯ ಪೂರ್ವಬಾವಿ ಸಭೆಯನ್ನು ನಡೆಸಲಿದ್ದು ಎಲ್ಲರೂ ಹಾಜರಾಗಿ ಸಲಹೆ ಸೂಚನೆ ನೀಡುವಂತೆ ಮನವಿ ಮಾಡಿದೆ. ನಗರದ ಹಿರಿಯನಾಗರೀಕರು, ನಿವೃತ್ತ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಮಹಿಳಾ ಸಂಘಟನೆಗಳು, ಯುವ ಸಂಘಟನೆ, ಕನ್ನಡಪರ ಸಂಘಟನೆ ಹಾಗೂ ನಗರದ ಅಭಿವೃದ್ದಿದೃಷ್ಠಿಯಿಂದ ಸಲಹೆ ಸೂಚನೆ ನೀಡುವ ಪ್ರತಿಯೊಬ್ಬರೂ ಪೂರ್ವಭಾವಿ ಸಭೆಗೆ ಹಾಜರಾಗಲು ಅವಕಾಶವಿದೆ.

## ದಿಂಡಾವರ ರಸ್ತೆ ಸರಿಪಡಿಸಲು ಆದೇಶಿಸಿದ ಸಚಿವರಿಗೆ ಅಭಿನಂದನೆ

» ಹಿರಿಯೂರು



ಭಾರತೀಯ ಕಿಸಾನ್ ಸಂಘದ ಜಿಲ್ಲಾ ಘಟಕದ ವತಿಯಿಂದ ಬೀದರ್‌ಟು ಶ್ರೀರಂಗಪಟ್ಟಣ ರಸ್ತೆ ಕಾಮಗಾರಿಗೆ ಮಣ್ಣು ಸಾಗಿಸಿ ರಸ್ತೆ ಹಾಳಾಗಿದ್ದರ ಬಗ್ಗೆ ಸಚಿವ ಡಿ.ಸುಧಾಕರ್‌ಅವರು ರಸ್ತೆ ಸರಿ ಪಡಿಸಲು ಆಗ್ರಹಿಸಿರುವುದನ್ನು ಅಭಿನಂದಿಸಿಲಾಗುತ್ತಿದೆ ಎಂದಿದ್ದಾರೆ.ಈ ಬಗ್ಗೆ ಕಿಸಾನ್ ಸಂಘದ ಪದಾಧಿಕಾರಿಗಳು ಮಾತನಾಡಿ, ಪಿಎನ್ ಸಿ ಕಂಪನಿಯವರು ಮಣ್ಣು ರಸ್ತೆಗೆ ಮಣ್ಣು ಸಾಗಿಸಿ ದಿಂಡಾವರ ರಸ್ತೆಯನ್ನು ಹಾಳುಗೆಡವಿದ್ದು, ಇದೀಗ ರಸ್ತೆ ದುರಸ್ತಿಗೆ ಸಚಿವರು ಆದೇಶಿಸಿದ್ದಾರೆ. ಆ ಪ್ರಕಾರ ಮಣ್ಣು ತೆಗೆಯುವ ಜಾಗದಿಂದ ಹಿರಿಯೂರಿನವರೆಗೆ ಸಂಪೂರ್ಣ ಡಾಂಬರ್‌ರಸ್ತೆಯನ್ನು ಮಾಡಿಕೊಡಬೇಕು.

ಈಬಗ್ಗೆ ಸಚಿವರುಮತ್ತೊಮ್ಮೆ ಕಂಪನಿಯವರಿಗೆ ತಾಕೀತು ಮಾಡಬೇಕು. ಕೇವಲ ರಸ್ತೆಯ ಗುಂಡಿಗಳಿಗೆತೇಪೆಹಾಕುವ ಕೆಲಸವಾಗಲಿಅಥವಾ ಬರೀಮಣ್ಣುಹಾಕುವಕೆಲಸವಾಗಲಿಆಗಬಾರದು. ಆ ಭಾಗದ ಬೆಳೆಗಳ ಮೇಲೆ ಧೂಳು ಕೂತು ಆಗಿರುವ ನಷ್ಟಕ್ಕೆ ಪಿಎನ್ಸಿ ಕಂಪನಿಯು ಪರಿಹಾರ ಕೊಡಬೇಕು. ಇದ್ಯಾವುದೂ ಆಗದೆ ಹೋದರೆ ಭಾರತೀಯ ಕಿಸಾನ್ ಸಂಘವು ಉಗ್ರ ಹೋರಾಟ ಹಮ್ಮಿಕೊಳ್ಳುತ್ತದೆ ಎಂದು ಸಂಘದ ಪದಾಧಿಕಾರಿಗಳು ಎಚ್ಚರಿಸಿದರು.ಈ ಸಂದರ್ಭದಲ್ಲಿ ಕಿಸಾನ್ ಸಂಘದ ತಾಲೂಕು ಅಧ್ಯಕ್ಷ ಗಡಾರಿ ಕೃಷ್ಣಪ್ಪ, ಕಾತ್ರಿಕೇನಹಳ್ಳಿ ಮಂಜುನಾಥ್, ದಿಂಡಾವರ ಚಂದ್ರಗಿರಿ, ಕೆಕೆ. ಹಟ್ಟಿ ಜಯಪ್ರಕಾಶ್, ಹುಚ್ಚವ್ವನಹಳ್ಳಿ ಗಿರೀಶ್, ಜಯಣ್ಣ, ತಿಪ್ಪೇಸ್ವಾಮಿ, ಹನುಮಂತಪ್ಪ, ಕುಮಾರಣ್ಣ ಹಾಜರಿದ್ದರು.

**ಪ್ರಮುಖ ಸುದ್ದಿ**

# ಜನಸಂಖ್ಯಾ ನಿಯಂತ್ರಣ ಅಭಿವೃದ್ಧಿಯ ಮಾನದಂಡ: ಟಿಹೆಚ್‌ಇಒ

» ಚಿತ್ರದುರ್ಗ



ತಾಯಿ ಮರಣ, ಶಿಶು ಮರಣ ನಿಯಂತ್ರಣದ ಜೊತೆಗೆ ಜನಸಂಖ್ಯಾ ನಿಯಂತ್ರಣವೂ ಒಂದು ಪ್ರಮುಖ ಅಭಿವೃದ್ಧಿಯ ಮಾನದಂಡವಾಗಿದೆ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ, ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಗ್ರಾಮ ಆರೋಗ್ಯ ಯೋಜನೆ ತರಬೇತಿ ಕಾರ್ಯಗಾರದಲ್ಲಿ ಕುಟುಂಬ ಯೋಜನೆಗಳ ಅನುಷ್ಠಾನದಲ್ಲಿ ಪುರುಷರ ಸಹಭಾಗಿತ್ವ ಎನ್‌ಎಸ್ ವಿ ಯೋಜನೆಯ ಮಾಹಿತಿ ಶಿಕ್ಷಣದಲ್ಲಿ ಅವರು ಮಾತನಾಡಿದರು.

ಮನೆ ಭೇಟಿ ಕುಟುಂಬ ಸಮೀಕ್ಷೆಗಳನ್ನು ನೋಡಿದಾಗ ಸಂತಾನ ಹರಣ ಶಸ್ತ್ರ ಚಿಕಿತ್ಸೆಯಲ್ಲಿ ಮಹಿಳೆಯರದೇ ಪ್ರಧಾನ ಪಾತ್ರವಾಗಿದೆ. ಮನೆಯ ಎಲ್ಲಾ ಕೆಲಸ ಕಾರ್ಯಗಳನ್ನು ನಿರ್ವಹಿಸುವಲ್ಲಿ ಮಹಿಳೆಯರೇ ಪ್ರಥಮ. ಜನಸಂಖ್ಯಾ ನಿಯಂತ್ರಣದಲ್ಲಿ ಪುರುಷರು ಏಕೆ ಸಹಕರಿಸಬಾರದು ಎಂದು ತಿಳಿಸಿದ ಅವರು, ಎನ್ ಎಸ್ ವಿ ಒಂದು ಸರಳ ಸುಲಭ ನೋವಿಲ್ಲದ ಹೊಲಿಗೆ ಇಲ್ಲದ ಸಂತಾನ ವಿರೋಧಿ ಚಿಕಿತ್ಸೆಯಾಗಿದೆ. ಮಹಿಳೆಯರಂತೆ ಪುರುಷರನ್ನ ದಿನಗಟ್ಟಲೆ ಆಸ್ಪತ್ರೆಯಲ್ಲಿ ಆರೈಕೆ ಮಾಡುವ ಅವಶ್ಯಕತೆ ಇರುವುದಿಲ್ಲ. ಪುರುಷತ್ವ ನಾಶವಾಗುತ್ತದೆ ಎಂಬ ಕೀಳರಿಮೆ ಬಿಟ್ಟು ಪುರುಷರು ಈ ಯೋಜನೆಯನ್ನು ಅಳವಡಿಸಿಕೊಂಡು ಮಹಿಳೆಯರ ಮೇಲೆ ಉಂಟಾಗುವ ಹೊರೆಯನ್ನ ನಿಮ್ಮ ಕುಟುಂಬದಿಂದಲೇ ತೆಗೆದುಕೊಳ್ಳಲು ಪ್ರಾರಂಭಿಸಿ ಎಂದರು.

ಮಾನಸಿಕ ರೋಗಗಳ ಆಪ್ತ ಸಮಾಲೋಚಕ ಡಾ.ಶ್ರೀಧರ್ ಮಾನಸಿಕ ರೋಗಗಳ ನಿಯಂತ್ರಣದ ಬಗ್ಗೆ ನೋಂದಾಯಿಸಿಕೊಳ್ಳುವ ಬಗ್ಗೆ ಚಿಕಿತ್ಸೆಯ ಬಗ್ಗೆ ಮಾಹಿತಿ ಶಿಕ್ಷಣ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮೂಗಪ್ಪ ಮಾತನಾಡಿ, ಇದೇ ನ.28 ರಿಂದ ಡಿ.4 ಜಿಲ್ಲಾ ಆಸ್ಪತ್ರೆಯ ಮತ್ತು ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ಎನ್ ಎಸ್ ವಿ ಶಿಬಿರದ ಸೇವಾ ಸೌಲಭ್ಯಗಳು ದೊರೆಯಲಿವೆ. ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಬಳಿ ಬರುವ ಗರ್ಭಿಣಿಯರ ಮನವೊಲಿಸಿ ಪಟ್ಟಿಮಾಡಿ ತಿಳಿಸಿದಲ್ಲಿ ಅವರ ಮನೆ ಬಾಗಿಲಿಗೆ ಬಂದು ಆಪ್ತ ಸಮಾಲೋಚನೆ ಮೂಲಕ ಮನವೊಲಿಸಲಾಗುವುದು ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರತ್ನಮ್ಮ ಮಾತನಾಡಿ, ಗ್ರಾಮ ನಿಗಾವಣ ತಂಡವನ್ನು ಚುರುಕುಗೊಳಿಸಿ ಎಲ್ಲಾ ವಾಡಗಳಲ್ಲಿಯೂ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಸುನಿತಾ, ಆರೋಗ್ಯ ನಿರೀಕ್ಷಣಾಧಿಕಾರಿ ತಿಮ್ಮಣ್ಣ, ಸಮುದಾಯ ಆರೋಗ್ಯ ಅಧಿಕಾರಿ ರಾಥೋಡ್, ಆರೋಗ್ಯ ಸುರಕ್ಷತಾ ಅಧಿಕಾರಿ ಕಲ್ಪನಾ ರೆಡ್ಡಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಇದ್ದರು.

## ಸಂವಿಧಾನದ ಮೂಲಕವೇ ರಾಷ್ಟ್ರದ ಆಡಳಿತ ಹಾಗೂ ಅಭಿವೃದ್ಧಿ: ನ್ಯಾ. ಶಮೀರ್ ಪಿ.ನಂದ್ಯಾಲ್

» ಚಳ್ಳಕೆರೆ

ರಾಷ್ಟ್ರದ ಆಡಳಿತ ಸುಲಲಿತವಾಗಿ ನಡೆದು ಅಭಿವೃದ್ಧಿಪಥದತ್ತ ಇಂದು ಮುನ್ನಡೆದಿದ್ದು ಇದಕ್ಕೆಲ್ಲಾ ಮೂಲಕಾರಣ ನಮ್ಮ ಸಂವಿಧಾನ ನಮಗೆ ನೀಡಿದ ಶಕ್ತಿ ಎಂದು ಹಿರಿಯ ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ್ ತಿಳಿಸಿದರು.

ಅವರು,ನಗರದವಾರಿಯರ್ಸ್‌ಶಾಲೆಯಲ್ಲಿ ಭಾರತ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ದೇಶದ ಸಂಪೂರ್ಣ ಆಡಳಿತ ಸಂವಿಧಾನ ನಿರ್ದೇಶನ ಮತ್ತು ಸೂಚನೆಯಂತೆ ನಡೆಯುತ್ತಾ ಬಂದಿದೆ. ನಮ್ಮನ್ನಾಳುವ ಜನಪ್ರತಿನಿಧಿಗಳನ್ನುಮತದಾನದ ಮೂಲಕ ಆಯ್ಕೆ ವ್ಯವಸ್ಥೆಯನ್ನು ಸಂವಿಧಾನ ನಮಗೆ ಕಲ್ಪಿಸಿದೆ. ನಾವೆಲ್ಲರೂ ಸಂವಿಧಾನವನ್ನು ಗೌರವಿಸುವ ಮತ್ತು ಅದರ ಮೌಲ್ಯವನ್ನು ಸಂರಕ್ಷಿಸುವ ಶಪಥ ಮಾಡಬೇಕು ಎಂದರು. ಪ್ರಧಾನ ಸಿವಿಲ್ ನ್ಯಾಯಾದೀಶೆ ಎಚ್.ಆರ್.ಹೇಮಾ ಮಾತನಾಡಿ, ಸಂವಿಧಾನವನ್ನು ಹೊರತು ಪಡಿಸಿ ನಾವು ಏನುಮಾಡಲು ಸಾಧ್ಯವಿಲ್ಲ. ಇಡೀ ರಾಷ್ಟ್ರದ ಆಡಳಿತ ಚುಕ್ಕಾಣಿ ಸಂವಿಧಾನ ಸೂಚಿಸಿದ ರೀತಿಯಲ್ಲಿ ನಡೆಯುತ್ತಿದೆ. ನಾವೆಲ್ಲರೂ ಇಂತಹ ಸುಧೀರ್ಘವಾದ ಸಂವಿಧಾನ ಪಡೆದಿರುವುದಕ್ಕೆ ಹೆಮ್ಮೆ ಪಡಬೇಕು ಸಂವಿಧಾನ ನಮೆಲ್ಲರ ರಕ್ಷಾ ಕವಚ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ನಾವು ನಮ್ಮ ಸಂವಿಧಾನವನ್ನು ಸಮರ್ಪಿಸಿಕೊಂಡು 75ವರ್ಷಗಳು ಆಗುತ್ತಾ ಬಂದಿದೆ. ರಾಷ್ಟ್ರದ ಸಂವಿಧಾನಕ್ಕೆ ಈಗ ಅಮೃತ ಮಹೋತ್ಸವದ ಸುವರ್ಣಸಂಭ್ರಮ. ಕೇವಲ ಭಾರತದಲ್ಲಿಯಷ್ಟೆಯಲ್ಲ, ವಿದೇಶದಲ್ಲೂ ನಮ್ಮ ಸಂವಿಧಾನದ ರೂಪುರೇಷೆಗಳ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿದೆ. ಸಂವಿಧಾನ ನಮ್ಮೆಲ್ಲರಿಗೂ ಆಶಾದೀಪವಾಗಿದೆ ಎಂದರು.

ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಮಾತನಾಡಿ, ಸಂವಿಧಾನವಿಲ್ಲದಿದ್ದರೆ ಇಡೀ ನಮ್ಮ ಆಡಳಿತ ವ್ಯವಸ್ಥೆ ಶೂನ್ಯವಾಗುತ್ತಿತ್ತು. ಯಾವುದೇ ರೀತಿಯ ಕಾರ್ಯಕಲಾಪ, ಚಟುವಟಿಕೆ ನಡೆಯಲು ಸಾಧ್ಯವಿಲ್ಲ. ಸಂವಿಧಾನದ ಮಾರ್ಗದರ್ಶನದ ಫಲವಾಗಿ ಇಂದು ನಾವೆಲ್ಲರೂ ಉತ್ತಮ ಆಡಳಿತ, ಉತ್ತಮ ಬದುಕನ್ನು ಹೊಂದಿದ್ದೇವೆ. ಸಂವಿಧಾನ ನಮ್ಮೆಲ್ಲರ ಆಶಾದೀಪವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾರಿಯರ್ಸ್ ವಿದ್ಯಾಸಂಸ್ಥೆ ಅಧ್ಯಕ್ಷೆ ಉಷಾಲೋಕನಾಥ ವಹಿಸಿದ್ದರು. ವಕೀಲರ ಸಂಘದ ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಖಜಾಂಚಿ ಟಿ.ರುದ್ರಯ್ಯ, ವಕೀಲ ದೊರೆನಾಗರಾಜ ಸಂಸ್ಥೆ ಕಾರ್ಯದರ್ಶಿ ಸುಭಾಷ್‌ಲೋಕನಾಥ, ಸಂಸ್ಥೆ ಖಜಾಂಚಿ ಎಲ್.ಮಾರುತಿ ಭಾಗವಹಿಸಿದ್ದರು.



### ಜಿಲ್ಲಾ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್ ಶಿಫ್ ಪಂದ್ಯ

## ಕ್ರೀಡಾಸ್ಫೂರ್ತಿಯಿಂದ ಪಂದ್ಯ ಗೆಲ್ಲಬೇಕು

» ಚಳ್ಳಕೆರೆ

ಜಿಲ್ಲಾ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್ ಶಿಫ್ ಪಂದ್ಯ ಇಲ್ಲಿನ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಯಶಸ್ವಿಯಾಗಿ ಮುಕ್ತಾಯವಾಗಿದ್ದು, ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ತಂಡಗಳು ಬಹುಮಾನವನ್ನು ಪಡೆದುಕೊಂಡರು.

ವಿಜೇತತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ತಾಲ್ಲೂಕು ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಟಿ.ಶ್ರೀನಿವಾಸ್, ಯಾವುದೇ ಪಂದ್ಯಗಳು ನಡೆಯಲಿ ಅದರಲ್ಲಿ ಹೋರಾಟದ ಜೊತೆಗೆಕ್ರೀಡಾಸ್ಫೂರ್ತಿಯೂ ಪ್ರಮುಖವಾಗುತ್ತದೆ. ಇಂದು ಮುಕ್ತಾಯವಾದ ಜಿಲ್ಲಾ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಪಂದ್ಯಾದಲ್ಲಿ 21 ಬಾಲಕ, 6 ಬಾಲಕಿಯರ ತಂಡಗಳು ಭಾಗವಹಿಸಿದ್ದವು.

ಬಾಲಕ ವಿಭಾಗದಲ್ಲಿ ಚಿತ್ರದುರ್ಗ ತಾಲ್ಲೂಕಿನ ಚವಲಹಳ್ಳಿ ಗೊಲ್ಲರಹಟ್ಟಿಯ ಸರ್ಕಾರಿ ಪ್ರೌಢಶಾಲೆ ಪ್ರಥಮ, ಎಸ್‌ಜಿಬಿ ಬೆಲಗೂರು ದ್ವಿತೀಯ, ತೃತೀಯ ಸ್ಥಾನ ಚವಲಹಳ್ಳಿ ಗೊಲ್ಲರಹಟ್ಟಿ ಬಿ.ತಂಡ, ಬಾಲಕಿಯರ ವಿಭಾಗದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಭರಮಸಾಗರ ಪ್ರಥಮ ಸ್ಥಾನ, ಚಿನ್ಮಯಿಶಾಲೆ ಚಳ್ಳಕೆರೆ ದ್ವಿತೀಯಸ್ಥಾನ, ರೋಟರಿಮಾಕಂಸ್ ಚಳ್ಳಕೆರೆ ತೃತೀಯ ಸ್ಥಾನ ಪಡೆದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪ್ರೌಢಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಡಿ.ಎಸ್.ಪಾಲಯ್ಯ, ರಾಜ್ಯವನ್ನು ಪ್ರತಿನಿಧಿಸಿದ ಖ್ಯಾತ ಆಟಗಾರರಾದ ಜೀವನ್‌ಧರ್ಮಪುರ, ಬೆಲಗೂರಿನ ಸುನೀಲ್‌ಕುಮಾರ್, ಶಿಕ್ಷಕಿ ಎಸ್.ಕೆ.ಕರಿಯಮ್ಮ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಶ್ರೀರಾಮನಾಯಕ, ಸಹ ಕಾರ್ಯದರ್ಶಿ ಆನಂದಬಾಬು, ಮಂಜುನಾಥ, ಜಾಫರ್, ಅನಿಲ್, ಸೈಯದ್ ಮುಂತಾದವರು ಭಾಗವಹಿಸಿದ್ದರು.



## ವಾಹನ ಬಳಕೆದಾರರಲ್ಲಿ ರಸ್ತೆ ಸುರಕ್ಷತೆಯ ಜಾಗೃತಿ ಕಾರ್ಯಕ್ರಮ




» ದಾವಣಗೆರೆ

ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಹಾಗೂ ಸಾರಿಗೆ ಇಲಾಖೆಯ ಸಹಯೋಗದಲ್ಲಿ ನಗರದ ಗುಂಡಿ ಮಾದೇವಪ್ಪ ವೃತ್ತದಲ್ಲಿ ದಾವಣಗೆರೆ ಮಹಾನಗರ ವ್ಯಾಪ್ತಿಯ ವಾಹನ ಬಳಕೆದಾರರಲ್ಲಿ ಹಾಗೂ ರಸ್ತೆ ಬಳಕೆದಾರರಲ್ಲಿ ರಸ್ತೆ ಸುರಕ್ಷತೆ ಕುರಿತು ಎಲ್‌ಇಡಿ ಮೂಲಕ ಜನಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಸಿ.ಎಸ್ ಪ್ರಮುತೇಶ್ ಅವರು 5 ಎಲ್.ಇ.ಡಿ ವಾಹನಗಳಿಗೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ದಾವಣಗೆರೆ ಸಂಚಾರ ವೃತ್ತ ನಿರೀಕ್ಷಕ ನಲವಾಗಲು ಮಂಜುನಾಥ್, ದಕ್ಷಿಣ ಸಂಚಾರ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಶೈಲಜಾ ಕೆ.ಎನ್, ನಿರ್ಮಲ ಡಿ.ಎಚ್, ಉತ್ತರ ಸಂಚಾರ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಮಂಜಪ್ಪ ಟಿ, ಜಯಶೀಲ, ಹಿರಿಯ ಮೋಟಾರ್ ವಾಹನ ನಿರೀಕ್ಷಕರಾದ ಎಸ್.ಟಿ ಸತೀಶ್, ದಾವಣಗೆರೆ ಸ್ಮಾರ್ಟ್ ಸಿಟಿ ಆಟೋ ಚಾಲಕರ ಮಾಲೀಕರ ಸಂಘದ ಜಿಲ್ಲಾಧ್ಯಕ್ಷರಾದ ಅಣ್ಣಪ್ಪ ಸ್ವಾಮಿ ಎಚ್ , ಖಜಾಂಚಿ ರಾಘವೇಂದ್ರ ಎಚ್.ಆರ್, ಮೋತಿವೀರಪ್ಪ ಕಾಲೇಜಿನ ವಿದ್ಯಾರ್ಥಿಗಳುಉಪಸ್ಥಿತರಿದ್ದರು.

## ಸಹಾಯಧನ ವಿತರಣೆಗೆ ಅಧಿಕಾರಿ ಅಡ್ಡಿ: ರೈತರ ಆರೋಪ

» ಚಳ್ಳಕೆರೆ

ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಅಧಿಕಾರಿ ತೋಗಾರಿಕೆ ಬೆಳೆ ಪ್ರದೇಶ ವಿಸ್ತರಣೆ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸಿದ ರೈತರಿಗೆ ಇದುವರೆಗೂ ಹಣ ನೀಡದೆ ವಿಳಂಬ ನೀತಿ ಅನುಸಿರುತ್ತಿದ್ದಾರೆಂದು ಆರೋಪಿಸಿ, ಕೂಡಲೇ ಸಹಾಯಧನ ಪಾವತಿಸಲು ನಿರ್ದೇಶನ ನೀಡಬೇಕೆಂದು ರೈತರು ಆಗ್ರಹ ಪಡಿಸಿದ್ದಾರೆ. ತಾಲ್ಲೂಕಿನ ಗೋಪನಹಳ್ಳಿ, ಅಡವಿಚಿಕ್ಕೇನಹಳ್ಳಿ, ಜಡೇಕುಂಟೆ, ಕಾಪರಹಳ್ಳಿ ಮುಂತಾದ ಗ್ರಾಮಗಳಲ್ಲಿ ರೈತರು ತೋಟಗಾರಿಕೆ ಬೆಳೆ ಪ್ರದೇಶ ವಿಸ್ತರಣೆ ಯೋಜನೆಯಡಿಯಲ್ಲಿ ಈಗಾಗಲೇ ಸಸಿಗಳನ್ನು ನೆಟ್ಟು 40 ದಿನಗಳು ಕಳೆದಿದ್ದು ಸಂಬಂಧಪಟ್ಟ ಕಸಬಾ ಸಹಾಯಕ ತೋಟಗಾರಿಕೆ ಅಧಿಕಾರಿ ಸ್ಥಳಕ್ಕೆ ಭೇಟಿ ನೀಡದೆ, ಜಿಪಿಎಸ್ ಪೋಟೋವನ್ನು ತಗೆಸದೆ ಸಹಾಯದನ ವಿತರಣೆಗೆ ಅಡ್ಡಿಪಡಿಸಿತ್ತಿದ್ದಾರೆಂದು ತಿಪ್ಪೇಸ್ವಾಮಿ, ಕೋಟಿ, ವೆಂಕಟೇಶ್, ಆರ್.ಅನಿಲ್‌ಕುಮಾರ್, ಮಹಂತೇಶ್, ಗಂಗಮ್ಮ, ಸಿ.ವೆಂಕಟೇಶ್ ಮುಂತಾದ ರೈತರು ಆರೋಪಿಸಿದ್ದಾರೆ. ಈಗಾಗಲೇ ಸಂಬಂಧಪಟ್ಟ ಇಂಜಿನಿಯರ್ ಸ್ಥಳಕ್ಕೆ ಭೇಟಿನೀಡಿ ಪರಿಶೀಲನೆ ನಡೆಸಿದ್ದರೂ ಸಹ ಸಹಾಯಕ ತೋಟಗಾರಿಕೆ ಅಧಿಕಾರಿ ಮಾತ್ರ ನಾನು ಖುದ್ದಾಗಿ ನೋಡುವ ತನಕ ಯಾವುದೇ ಪೈಲ್‌ಗೆ ಸಹಿ ಮಾಡುವುದಿಲ್ಲವೆಂದು ಹೇಳುತ್ತಿದ್ದಾರೆ. ಇದರಿಂದ ರೈತರು ಸುಮಾರು ಎರಡು ತಿಂಗಳುಗಳಿಂದ ಅವರ ಬರುವಿಗೆಗಾಗಿ ಕಾದು ಸಹಾಯ ದನಕ್ಕಾಗಿ ಕಚೇರಿಗೆ ಅಲೆಯುವಂತಾಗಿದೆ. ಶಾಸಕರು ಕ್ರಮ ಕೈಗೊಳ್ಳಬೇಕೆಂದು ಮನವಿ ಮೂಲಕ ವಿನಂತಿಸಿದ್ದಾರೆ. ಶಾಸಕ ರಘುಮೂರ್ತಿ ಮಾತನಾಡಿ, ರೈತರಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸಹಾಯಕ ತೋಟಗಾರಿಕೆ ಅಧಿಕಾರಿಗೆ ಹಿರಿಯ ತೋಟಗಾರಿಕೆ ಅಧಿಕಾರಿಗಳು ಮಾರ್ಗದರ್ಶನ ನೀಡಬೇಕು. ರೈತರ ಹಿತವನ್ನು ಅಲಕ್ಷಿಸಬಾರದು, ಕೂಡಲೇ ರೈತರ ಸಹಾಯ ಧನ ಬಿಡುಗಡೆಗೆ ಕ್ರಮಕೈಗೊಳ್ಳಬೇಕೆಂದು ಸೂಚಿಸಿದರು.



ಚಳ್ಳಕೆರೆ ತಾಲ್ಲೂಕಿನ ವಿವಿಧ ಗ್ರಾಮಗಳ ರೈತರು ತೋಟಗಾರಿಕೆ ಬೆಳೆ ಸಹಾಯಕಧನಕ್ಕಾಗಿ ಕಚೇರಿಗೆ ಅಲೆದಾಡುತ್ತಿರುವ ರೈತರು.

**ಪ್ರಮುಖ ಸುದ್ದಿ**

## ಆಂಟಿಮೈಕ್ರೋಬಿಯಲ್ ಕುರಿತ ಜಾಗೃತಿ ಜಾಥಾ

» ಚಿತ್ರದುರ್ಗ

ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಎಸ್‌ಜೆಎಂ ಫಾರ್ಮಸಿ ಕಾಲೇಜು ಮತ್ತು ಐಎಂಎ ಸಹಯೋಗದಲ್ಲಿ ಇಂದು ವಿಶ್ವ ಆಂಟಿಮೈಕ್ರೋಬಿಯಲ್ ಕುರಿತ ಜಾಗೃತಿ ಜಾಥಾವನ್ನು ಆಯೋಜನೆ ಮಾಡಲಾಗಿತ್ತು. ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಡಾ.ಬಸವಕುಮಾರ ಸ್ವಾಮೀಜಿ ಮತ್ತು ಪೊಲೀಸ್ ವರಿಷ್ಠಾಧಿಕಾರಿಯಾದ ರಂಜಿತ್ ಕುಮಾರ್ ಬಂಡಾರು ಚಾಲನೆ ನೀಡಿದರು.

ಜನರಿಗೆ ಆಂಟಿಬಯೋಟಿಕ್ಸ್ ಯಾವ ರೀತಿ ಉಪಯೋಗಿಸಬೇಕು ಎಂದು ಗೊತ್ತಾಗಬೇಕು. ಮತ್ತೆ ಆಂಟಿಬಯೋಟಿಕ್ಸ್ ಉಪಯೋಗಿಸುವ ಮೊದಲು ವೈದ್ಯರ ಸಲಹೆ ಪಡೆದು ಉಪಯೋಗಿಸಿ ಎಂದು ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ತಿಳಿಸಿದರು.

ನಾವು ಬೆಳೆದ ಬೆಳೆಗೆ ಯಾವ ರೀತಿ ಕ್ರಿಮಿನಾಶಕ ಹಾಕಬೇಕು ಎಂಬುದರ ಬಗ್ಗೆ ಮಾಹಿತಿ ಇರಬೇಕು. ಹಾಗೇಯೆ ನಮ್ಮ ದೇಹಕ್ಕೆ ಯಾವ ರೀತಿಯ ಔಷಧಿ ನೀಡಿದರೆ ಸೂಕ್ತ ಎಂಬುದರ ಬಗ್ಗೆ ವೈದ್ಯರು ಹೆಚ್ಚಿನ ಕಾಳಜಿವಹಿಸಬೇಕು ಎಂದು ಡಾ.ಬಸವಕುಮಾರ ಸ್ವಾಮೀಜಿ ತಿಳಿಸಿದರು.

ನಗರದ ಪ್ರವಾಸಿಮಂದಿರದಿಂದ ಹಿಡಿದು ಡಿ.ಸಿ ಕಚೇರಿವರೆಗೆ ಜನಸಾಮಾನ್ಯರಿಗೆ ಘೋಷಣೆ ಕೂಗುವುದರ ಮೂಲಕ ಅರಿವು ಮೂಡಿಸಲಾಯಿತ್ತು. ಸುಮಾರು 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ನಂತರ ಡಿ.ಸಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ವಿಶ್ವ ಆಂಟಿಮೈಕೋಬಿಯಲ್ ಪ್ರತಿರೋಧಕದ ಬಗ್ಗೆ ತಿಳಿಸಲಾಯಿತ್ತು.

ಬಸವೇಶ್ವರ ಆಸ್ಪತ್ರೆಯ ಎಲ್ಲಾ ಬೋಧಕ ಸಿಬ್ಬಂದಿ ಮತ್ತು ಐಎಂಎ ಸಹಯೋಗದೊಂದಿಗೆ ಜಿಲ್ಲಾಧಿಕಾರಿಗಳಿಗೆ ಆಂಟಿಬಯೋಟಿಕ್ ದುರ್ಬಳಕೆ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಮನವಿ ಪತ್ರ ಸಲ್ಲಿಸಲಾಯಿತು. ಈ ಬಾರಿ ವಿಶ್ವ ಸಂಸ್ಥೆ ಅರಿಮೂಡಿಸಿ, ಪ್ರತಿಪಾದಿಸಿ, ಕಾರ್ಯಪ್ರವೃತ್ತರಾಗಿ ಎಂಬ ಮೂರು ಘೋಷಣಾ ವಾಕ್ಯವನ್ನು ವಿದ್ಯಾರ್ಥಿಗಳು ಕೂಗುವುದರ ಮೂಲಕ ಇದರ ಬಗ್ಗೆ ಜಾಗೃತಿ ಮೂಡಿಸಿದರು.

ಜಾಥದಲ್ಲಿ ವೈದ್ಯಕೀಯ ಅಧೀಕ್ಷಕರಾದ ಡಾ.ರಾಜೇಶ್, ಡಾ.ನಾಗೇಂದ್ರಗೌಡ, ಡಾ. ಸುಧೀಂದ್ರ, ಡಾ.ಶುಭ, ಐಎಂಎ ಅಧ್ಯಕ್ಷರಾದ ಡಾ.ಪಾಲಾಕ್ಷಪ್ಪ, ಕಾರ್ಯದರ್ಶಿ ಡಾ.ಬ್ಲಾಕ್, ಎಸ್‌ಜೆಎಂ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲರಾದ ನಾಗರಾಜ್ ಸೇರಿದಂತೆ ಎಲ್ಲಾ ಬೋಧಕ ಸಿಬ್ಬಂದಿ ವರ್ಗದವರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು, ಫಾರ್ಮಸಿ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.



---

### ಫಾಸ್ಟ್ ನ್ಯೂಸ್

## ಸಭೆಯ ನಿರ್ಣಯಗಳು ಜಾರಿ ಆಗದೇ ಇದ್ದರೆ ನಾನು ಸಹಿಸಲ್ಲ: ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮ ಖಚಿತ: ಸಿಎಂ

» ಬೆಂಗಳೂರು

ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುವ ಬುಡಕಟ್ಟು ಸಮುದಾಯಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮುಖ್ಯಮಂತ್ರಿಯವರು ನೀಡಿದ ಇತರೆ ಸೂಚನೆಗಳು...

- ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುವ ಬುಡಕಟ್ಟು ಸಮುದಾಯಗಳ ಜನರಿಗೆ ಮನೆ, ಕುಡಿಯುವ ನೀರು, ರಸ್ತೆ ಸಂಪರ್ಕ, ವಿದ್ಯುತ್ ಸಂಪರ್ಕ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಬೇಕು.
- ರಸ್ತೆಗಳ ಅಭಿವೃದ್ಧಿಗೆ ಮತ್ತು ಕುಡಿಯುವ ನೀರು ಸೌಲಭ್ಯ ಕಲ್ಪಿಸಲು ಯಾವುದೇ ಅಡ್ಡಿ ಉಂಟು ಮಾಡಬಾರದು. ಪ್ರತಿ ಹಾಡಿಯಲ್ಲಿ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಬೇಕು.
- ಪಡಿತರ ಚೀಟಿ ಹೊಂದಿಲ್ಲದ ಬುಡಕಟ್ಟು ಕುಟುಂಬಗಳಿಗೆ 15 ದಿನ ಒಳಗಾಗಿ ಬಿಪಿಎಲ್ ಪಡಿತರ ಚೀಟಿ ಒದಗಿಸಿ ವರದಿ ಸಲ್ಲಿಸಬೇಕು.
- ಅರಣ್ಯ ಹಕ್ಕು ಸಮಿತಿಗಳ ಮುಂದೆ ಬಾಕಿಯಿರುವ ಅರ್ಜಿಗಳನ್ನು ನಿಗದಿತ ಅವಧಿಯ ಒಳಗಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು.
- ಆರೋಗ್ಯ ಇಲಾಖೆಯಲ್ಲಿ ಬುಡಕಟ್ಟು ಜನರನ್ನು ಸ್ಥಳೀಯವಾಗಿ ನೇಮಕ ಮಾಡುವ ಬಗ್ಗೆ ಪರಿಶೀಲನೆ ಮಾಡಲಾಗುವುದು.
- ಬುಡಕಟ್ಟು ಸಮುದಾಯದವರಿಗೆ ಹಾಡಿಗಳಲ್ಲಿ ಸ್ಮಶಾನ ಭೂಮಿ ಒದಗಿಸಬೇಕು.
- ಬುಡಕಟ್ಟು ಸಮುದಾಯ ಕಲ್ಪಿಸುವ ವಿಷಯದಲ್ಲಿ ಕಂದಾಯ, ಅರಣ್ಯ ಮತ್ತು ಸಮಾಜ ಕಲ್ಯಾಣ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು.
- ಸಂಪರ್ಕ ರಸ್ತೆಗಳ ದುರಸ್ತಿ, ಉನ್ನತೀಕರಣಕ್ಕೆ ರಾಜ್ಯ ಸರ್ಕಾರದ ಹಂತದಲ್ಲಿ ಇರುವ ಅವಕಾಶಗಳನ್ನು ಬಳಸಿಕೊಳ್ಳಬೇಕು.
- ಎರಡು ತಿಂಗಳ ಒಳಗಾಗಿ ಮತ್ತೆ ಸಭೆ ಕರೆದು ಈ ಎಲ್ಲಾ ವಿಷಯಗಳ ಕುರಿತು ಪರಿಶೀಲನೆ ನಡೆಸಲಾಗುವುದು. ಅದರ ಒಳಗಾಗಿ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಬೇಕು.

**ಮನೆ ನಿರ್ಮಾಣ:**

- ನಿವೇಶನ ರಹಿತರು ಒಪ್ಪಿಗೆ ಸೂಚಿಸಿದರೆ ಅವರಿಗೆ ಬೇರೆ ಕಡೆ ನಿವೇಶನ ಒದಗಿಸಿ ಪುನರ್ವಸತಿ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಅರಣ್ಯದ ಅಂಚಿನಲ್ಲಿ ಜಮೀನುಗಳನ್ನು ಗುರುತಿಸಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.
- ನಿವೇಶನ ಇದ್ದರೂ ಮನೆಯಿಲ್ಲದವರಿಗೆ ರಾಜೀವ್ ಗಾಂಧಿ ವಸತಿ ನಿಗಮದ ವತಿಯಿಂದ ಮನೆ ಮಂಜೂರಾತಿಗೆ ಕ್ರಮ ಕೈಗೊಳ್ಳಬೇಕು.
- ಮೈಸೂರು ಜಿಲ್ಲೆಯಲ್ಲಿ 2963ಕುಟುಂಬಗಳಿಗೆ ನಿವೇಶನ ಇರುವುದಿಲ್ಲ. 1222 ಕುಟುಂಬಗಳಿಗೆ ನಿವೇಶನ ಇದ್ದರೂ, ಮನೆ ಇರುವುದಿಲ್ಲ.
- ಚಾಮರಾಜನಗರ ಜಿಲ್ಲೆಯಲ್ಲಿ 5164 ಕುಟುಂಬಗಳಿಗೆ ಪಕ್ಕಾ ಮನೆಯಿದೆ. 234 ಕುಟುಂಬಗಳಿಗೆ ನಿವೇಶನ ಇರುವುದಿಲ್ಲ. 2761 ಕುಟುಂಬಗಳಿಗೆ ನಿವೇಶನ ಇದ್ದರೂ, ಮನೆ ಇರುವುದಿಲ್ಲ.
- ಕೊಡಗು ಜಿಲ್ಲೆಯಲ್ಲಿ 2882 ಕುಟುಂಬಗಳಿಗೆ ಪಕ್ಕಾ ಮನೆಯಿದೆ. 1050 ಕುಟುಂಬಗಳಿಗೆ ನಿವೇಶನ ಇರುವುದಿಲ್ಲ. 1182 ಕುಟುಂಬಗಳಿಗೆ ನಿವೇಶನ ಇದ್ದರೂ ಮನೆ ಇರುವುದಿಲ್ಲ.

**ವಿದ್ಯುತ್ ಸಂಪರ್ಕ**

- ಮೈಸೂರು ಜಿಲ್ಲೆಯಲ್ಲಿ 194 ಹಾಡಿಗಳು ಅರಣ್ಯದಂಚಿನಲ್ಲಿದ್ದು, ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಅರಣ್ಯದೊಳಗಿರುವ 21 ಹಾಡಿಗಳ ಪೈಕಿ ಮೂರು ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದ್ದು, 18 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಇರುವುದಿಲ್ಲ. 18 ಹಾಡಿಗಳಿಗೆ ಇಂಧನ ಇಲಾಖೆಯಿಂದ ಸೋಲಾರ್ ದೀಪಗಳನ್ನು ಅಳವಡಿಸಲಾಗಿದೆ.
- ಚಾಮರಾಜನಗರ ಜಿಲ್ಲೆಯಲ್ಲಿ ಅರಣ್ಯದಂಚಿನಲ್ಲಿರುವ ಎಲ್ಲಾ 125 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಅರಣ್ಯದೊಳಗಿರುವ 33 ಹಾಡಿಗಳ ಪೈಕಿ 15 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಇನ್ನುಳಿದಿರುವ 18 ಹಾಡಿಗಳಿಗೆ ಇಂಧನ ಇಲಾಖೆಯಿಂದ ಸೋಲಾರ್ ದೀಪಗಳನ್ನು ಅಳವಡಿಸಲಾಗಿದೆ.
- ಕೊಡುಗು ಜಿಲ್ಲೆಯಲ್ಲಿ ಅರಣ್ಯದಂಚಿನಲ್ಲಿರುವ 211 ಹಾಡಿಗಳ ಪೈಕಿ 154 ಹಾಡಿಗಳಿಗೆ ಹಾಗೂ ಅರಣ್ಯದೊಳಗಿರುವ 74 ಹಾಡಿಗಳ ಪೈಕಿ 57 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. 17 ಹಾಡಿಗಳಿಗೆ ವಿದ್ಯುತ್ ಸಂಪರ್ಕ ಇರುವುದಿಲ್ಲ. 5 ಹಾಡಿಗಳಿಗೆ ಸೋಲಾರ್ ದೀಪಗಳನ್ನು ಅಳವಡಿಸಲಾಗಿದೆ.
- ವಿದ್ಯುತ್ ಸಂಪರ್ಕ ಕಲ್ಪಿಸಲು ಬಾಕಿಯಿರುವ ಪ್ರಸ್ತಾವನೆಗಳಿಗೆ ಶೀಘ್ರ ಅನುಮತಿ ನೀಡಿ ಶಾಶ್ವತ ವಿದ್ಯುತ್ ಸಂಪರ್ಕ ಕಲ್ಪಿಸಬೇಕು.







# ನಂಬಿಕೆಗೆ ಯಾರು ಯಾರು ಅರ್ಹರು



» ಬರಹಗಾರ್ತಿ:
ಮಂಜುಳಾ ನಾಗರಾಜ್
ತುಮಕೂರು





ಭೂಮಿಯ ಮೇಲೆ ಪ್ರತಿದಿನ ಸಾವಿರ ಜನ ಹುಟ್ಟುತ್ತಾರೆ ಸಾವಿರ ಜನ ಸಾಯುತ್ತಾರೆ ಇಷ್ಟು ಜನಗಳ ಮಧ್ಯೆ ನಾನು ಯಾರು? ಎಂಬ ಪ್ರಶ್ನೆ ಮನಸ್ಸಿನಲ್ಲಿ ಉದ್ಭವಗೊಳ್ಳಬೇಕು.

ಇತ್ತೀಚಿನ ದಿನಗಳಲ್ಲಿ ಸಹಾಯ ಮಾಡುವ ನೆಪದಲ್ಲಿ ಹಿಂದೆ ಒಂದು ಪ್ರತಿತಂತ್ರ ಇದ್ದೇ ಇರುತ್ತದೆ. ಸಣ್ಣದನ್ನು ಕೊಟ್ಟು ದೊಡ್ಡದನ್ನು ಬಾಚಿಕೊಳ್ಳುವ ಜನರ ತುಂಬಾ ಜನ ಇದ್ದಾರೆ. ಅವರಿಗೆ ತನ್ನ ತನದ ಅರಿವೇ ಇರುವುದಿಲ್ಲ, ಮನುಷ್ಯನಿಗೆ ಅಸೆ ಎಲ್ಲಿಯವರೆಗೆ ಇರುತ್ತದೋ ಅಲ್ಲಿಯವರೆಗೆ ಪ್ರತಿ ತಂತ್ರವನ್ನು ರೂಪಿಸುತ್ತಾನೆ.

## ನಂಬಿಕೆ...

ನಂಬಿಕೆಯಲ್ಲಿ ಇರುತ್ತದೋ ಅಲ್ಲಿ ಪ್ರೀತಿ-ವಿಶ್ವಾಸಕ್ಕೆ ಏನು ಕಡಿಮೆ ಇರುವುದಿಲ್ಲ ಎಲ್ಲವೂ ಹೆಚ್ಚಿರುತ್ತದೆ.

ಯಾವುದೇ ಒಂದು ಕೆಲಸ ಮಾಡಬೇಕಾದರೆ ನಂಬಿಕೆ ತುಂಬಾನೇ ಮುಖ್ಯ ನಂಬಿಕೆ ಎಂಬುವುದನ್ನು ಕಳೆದುಕೊಂಡರೆ ಮತ್ತೆ ಆ ನಂಬಿಕೆಯನ್ನು ಸಂಪಾದಿಸುವುದಕ್ಕೆ ತುಂಬಾನೇ ಕಷ್ಟ, ಮನುಷ್ಯನಿಗೆ ನಂಬಿಕೆ ತುಂಬಾನೇ ಮುಖ್ಯ ಒಳ್ಳೆ ಕೆಲಸ ಮಾಡಬೇಕಾದರೆ ನಂಬಿಕೆಯಿಂದಲೇ ಜನಗಳ ನಡುವೆ ಪ್ರೀತಿ-ವಿಶ್ವಾಸ ಬೆಳೆದು ಬದುಕುವುದಕ್ಕೆ ದಾರಿ ತೋರಿಸುತ್ತದೆ. ರಾಜಕೀಯದ ನಂಬಿಕೆಯ ಮಾತುಗಳನ್ನು ಯಾವತ್ತೂ ಕೂಡ ಜನಗಳ ಮೇಲೆ ಪ್ರಯೋಗ ಮಾಡಬಾರದು ನಾವು ಏನೇ ಹೇಳಿದರೂ ಜನ ಕೇಳುತ್ತಾರೆ ಎಂದು ಅವರಿಗೆ ಮಂಕುಬೂದಿ ಹಚ್ಚುವ ಪ್ರಯತ್ನ ಮಾಡಬಾರದು.

ಅಜ್ಞಾನದಿಂದ ಬೆಳೆದುಬಂದಿರುವ ಜನಗಳು ಬೆಳ್ಳಗಿರುವುದೆಲ್ಲ ಹಾಲು ಎಂದು ತಿಳಿದುಕೊಳ್ಳುತ್ತಾರೆ. ನಮ್ಮ ಕೈಯಲ್ಲಿ ಯಾವುದಾದರೂ ಕೆಲಸ ಆಗುತ್ತೆ ಅಂದರೆ ಮಾತ್ರ ನಿನ್ನ ನಂಬಿದ ಜನರಿಗೆ ಭರವಸೆಗಳನ್ನು ಕೊಡಬೇಕೆ ವಿನಹ ಮನೆಗಳಿಗೆ ಕರೆಸಿಕೊಳ್ಳಬಾರದು, ನಂಬಿಕೆಗೆ ಎಲ್ಲಿ ಕೂತುಬರುತ್ತೋ ಆಗ ಮನುಷ್ಯ ಇದ್ದು ಸತ್ತಂತೆ. ನಿಮ್ಮ ನಂಬಿಕೆಗಳನ್ನು ನಂಬಿಕೊಂಡ ಅದೆಷ್ಟೋ ಜನರು ಒಳ್ಳೆಯ ಜೀವನದ ಕಡೆಗೆ ಕನಸು ಕಾಣುತ್ತಿರುತ್ತಾರೆ. ಅಂತಹ ಕನಸುಗಳಿಗೆ ತಣ್ಣೀರು ಎರಚ್ಚುವ ಪ್ರಯತ್ನ ಮಾಡಬಾರದು ಆದಷ್ಟು ಒಳ್ಳೆಯ ಕನಸುಗಳನ್ನು ಕಾಣುವ ರೀತಿಯಲ್ಲಿ ನಂಬಿಕೆಗಳನ್ನು ಉಳಿಸಿಕೊಂಡು ಹೋಗಬೇಕು.

## ಪ್ರೀತಿ,ಸ್ನೇಹ, ಸಂಬಂಧ ಸಂಪಾದನೆ

ತನ್ನನ್ನು ತಾನು ಅರಿಯಬೇಕಾದರೆ ಮೂರು ವಿಷಯಗಳಲ್ಲಿ ಪ್ರಾಮಾಣಿಕತೆ ಇರಬೇಕು ಎಲ್ಲರನ್ನೂ ಪ್ರೀತಿ ಮಾಡಬೇಕು, ಸ್ನೇಹದಿಂದ ಕೂಡಿರುವುದು, ಸಂಬಂಧಗಳ ಬೆಸುಗೆ ತಿಳಿದಿರಬೇಕು, ಪ್ರಪಂಚದಲ್ಲಿ ಪ್ರೀತಿ-ಸ್ನೇಹ ಸಂಬಂಧಗಳಿಗೆ ಇರುವಷ್ಟು ಬೆಲೆ ಇನ್ನೆಲ್ಲೂ ಸಿಗದು ಈ ಜಾತಿ ವ್ಯವಸ್ಥೆಯಲ್ಲಿ ಪ್ರೀತಿ-ಸ್ನೇಹ ಸಂಬಂಧಗಳಿಗೆ ಏನು ಕಡಿಮೆ ಇಲ್ಲ ನಾವು ಪ್ರೀತಿಸುವ ಜನರ ನಡುವೆ ಯಾರಿಗೆ ಪ್ರೀತಿ ಕೊಡಬೇಕು ಯಾರಿಗೆ ಕೊಡಬಾರದು ಎಂಬ ತೀರ್ಮಾನ ಮಾಡಿಕೊಂಡಿರಬೇಕು

ತಂದೆ ತಾಯಿಯರ ಪ್ರೀತಿ, ಅಕ್ಕ-ತಂಗಿಯರ ಪ್ರೀತಿ, ಅಣ್ಣ ತಮ್ಮಂದಿರ ಪ್ರೀತಿ, ಅಜ್ಜ-ಅಜ್ಜಿಯ ಪ್ರೀತಿ, ಎಲ್ಲವೂ ಈ ಪ್ರೀತಿಯಿಂದಲೇ ಕೂಡಿದೆ. ಪ್ರೀತಿಗೆಯಲ್ಲಿ ಮೋಸ ಆಗುತ್ತೋ ಅಲ್ಲಿ ವಿಷದ ಬೀಜಗಳು ಬೆಳೆದು ಹೆಮ್ಮರವಾಗಿ ದ್ವೇಷದ ರಾಜಕೀಯ ಬೆಳೆಯುತ್ತದೆ. ಪ್ರೀತಿಯಿಂದ ಎಲ್ಲವೂ ದೊರಕುತ್ತದೆ ಆದರೆ ಆ ಪ್ರೀತಿ ನಿಜವಾಗಿರಬೇಕು ಸತ್ಯದಿಂದ ಕೂಡಿರಬೇಕು ಆಗಮಾತ್ರ ಪ್ರೀತಿಯಿಂದ ಎಲ್ಲವನ್ನು ಪಡೆದುಕೊಳ್ಳಬಹುದು ಎಲ್ಲರನ್ನೂ ಪ್ರೀತಿಸಿ ಪ್ರೀತಿಯಿಂದ ಜೀವನಸಾಗಿಸಿ ಇರುವಷ್ಟು ಕಾಲ ನೆಮ್ಮದಿ ಬದುಕು ಸಾಗಿಸಬೇಕು. ಪ್ರೀತಿಗೆ ಎಲ್ಲಿ ಮೋಸ ಇರಲು ಅಲ್ಲಿ ಹೆಚ್ಚು ಪ್ರೀತಿ ಮಾಡಿ ಪ್ರೀತಿಯಿಂದ ಎಲ್ಲರ ಮನಸ್ಸನ್ನು ಗೆಲ್ಲಿ ಪ್ರೀತಿಗೆ ಎಂದು ಮೋಸವಿಲ್ಲ

ಇವುಗಳ ಜೊತೆಗೆ ಸ್ನೇಹಿತರಿಂದ ಕೂಡ ಒಳ್ಳೆ ಒಳ್ಳೆಯ ಅಭಿಪ್ರಾಯಗಳನ್ನು ಹಂಚಿಕೊಳ್ಳಬೇಕು ಸ್ನೇಹಿತರೆ ಒಂದೇ ತಟ್ಟೆಯಲ್ಲಿ ಊಟ ಮಾಡಿ, ಒಂದೇ ಹಾಸಿಗೆ ಮೇಲೆ ಮಲಗಿ, ಜಾಲಿ ದಿನಗಳನ್ನು ಕಳೆದದ ಮೇಲೆ ಅವನೆಲ್ಲೋ ನಾನೆಲ್ಲೋ ಹಾಗೆ ಇರಬಾರದು ಸಹಾಯ ಅಂತ ಬಂದಾಗ ಅವನ ಕೈಯಲ್ಲಿ ಎಷ್ಟು ಸಾಧ್ಯವೋ ಅಷ್ಟು ಸಹಾಯ ಹಸ್ತ ನೀಡಬೇಕು ಕಷ್ಟದಲ್ಲಿ ಇರುವ ಸ್ನೇಹಿತನನ್ನು ಮೇಲೆ ತರುವ ಪ್ರಯತ್ನವನ್ನು ಮಾಡಬೇಕು ಗೆಳೆಯನಾದವನು, ಸ್ನೇಹ ಅಂದರೆ ಅದೊಂದು ಶಕ್ತಿ ಎರಡು ಕೈ ಸೇರಿದರೆ ಮಾತ್ರ ಚಪ್ಪಾಳೆ ಅನ್ನುವ ರೀತಿಯಲ್ಲಿ ಸ್ನೇಹಿತರ ಎಂಬ ಗುಂಪು ಸೇರಿದರೆ ಆನೆ ಬಲ ಬಂದಂತೆ ಈ ಬಲದಿಂದ ಕಷ್ಟದ ಹಾದಿಗಳನ್ನು ತೊರೆದು ಬೆಳಕಿನಡೆಗೆ ದಾರಿಯನ್ನು ತೋರಿಸುವ ಕೆಲಸಗಳನ್ನು ಮಾಡಬೇಕು ಆಗಮಾತ್ರ ಸ್ನೇಹಕ್ಕೆ ಒಂದು ಅರ್ಥ ಒಂದು ಬೆಲೆ ದೊರೆಯುತ್ತದೆ.

ಸ್ನೇಹ ಮಾಡಬೇಕಾದರೆ ನಾವು ಎಂಥವರ ಜೊತೆ ಸ್ನೇಹ ಮಾಡಬೇಕು ಎಂದು ತಿಳಿದುಕೊಳ್ಳಬೇಕು ಸ್ನೇಹ ಅಂದ್ರೆ ಬರೀ ಬೈಕಿನಲ್ಲಿ ಸುತ್ತಾಡಿ ಅಂಗಡಿಗಳಲ್ಲಿ ಟಿ, ಕಾಫಿ ಸಿಗರೇಟ್, ತಿಂಡಿ ತಿನಿಸುಗಳನ್ನು ತಿಂದು, ಪ್ರವಾಸಿ ತಾಣಗಳಲ್ಲಿ ಪಾರ್ಟಿ ಮಾಡಿ, ಹಳೆಯ ನೆನಪುಗಳನ್ನು ಮೊಬೈಲ್ ಸ್ಟೇಟಸ್ ಗಳಲ್ಲಿ ನೆನಪಿಸಿಕೊಂಡು, ಹಳೆಯ ನೆನಪಿನ ಹಾದಿಯಲ್ಲಿ ಅಂತ ಬರೆದರೆ ಏನು? ಫಲ ಸ್ನೇಹ ಅಂದರೆ ಒಂದು ಗುಂಪು ಆ ಗುಂಪಿನಲ್ಲಿ ಒಳ್ಳೆ ಮನಸ್ಸು ಕೆಟ್ಟ ಮನಸ್ಸುಗಳು ಇರುತ್ತವೆ ಅವುಗಳನ್ನು ಆಯ್ಕೆ ಮಾಡಿಕೊಳ್ಳುವುದು ನಮಗೆ ಬಿಟ್ಟಿದ್ದು ಆಯ್ಕೆಯಲ್ಲಿ ತಪ್ಪಿದ್ದಲ್ಲಿ ನಾವು ಜನಗಳು ತೋರಿಸುವ ಬೆಟ್ಟಿನ ಮುಂದೆ ಇರುತ್ತೇವೆ.

ಒಂದಿಷ್ಟು ಗೆಳೆಯರು ಗುಂಪಿನಿಂದ ಸಾಮಾಜಿಕ ಸಹಾಯಗಳನ್ನು ಮಾಡಿದ್ದಲ್ಲಿ ಜನಗಳು ಕೈಯೆತ್ತಿ ಮುಗಿಯುತ್ತಾರೆ. ಅಂತಹ ಗೆಳೆಯರನ್ನು ಆಯ್ಕೆ ಮಾಡಿಕೊಳ್ಳುವುದರಲ್ಲಿ ನಾವು ದಾರಿ ತಪ್ಪಬಾರದು ಸ್ನೇಹಕ್ಕೆ ಎಲ್ಲಿ ಮೋಸ ಆಗುತ್ತೋ ಅಲ್ಲಿ ತಂತ್ರದ ಕಥೆ ಇರುತ್ತದೆ ಅವರ ಬೇಳೆ ಕಾಳಿಗೆ ನಾವು ಬಲಿಯಾಗಬಾರದು.

ಸಂಬಂಧವೂ ಅಷ್ಟೇ ನಾವ್ಯಾರು ಎಂಬುವುದನ್ನು ಗುರುತಿಸುವುದಕ್ಕೆ ತುಂಬಾ ಸಮಯ ತೆಗೆದುಕೊಳ್ಳುತ್ತದೆ ಕೆಟ್ಟ ಕೆಲಸಗಳನ್ನು ಮಾಡಿಕೊಳ್ಳುತ್ತಾ ಬಂದರೆ ಸಂಬಂಧಿಕರು ಅವಹೇಳನಕಾರಿ ಮಾತುಗಳನ್ನು ಆಡುತ್ತಾರೆ. ಸಮಾಜದಲ್ಲಿ ಉನ್ನತ ವ್ಯಕ್ತಿಯಾದಲ್ಲಿ ಮಾತುಗಳಲ್ಲಿ ಮಂಚ ಹತ್ತಿಸುತ್ತಾರೆ. ಸಂಬಂಧಗಳು ವಿಷದ ಬೀಜಗಳನ್ನು ಬಿತ್ತುತ್ತವೆ ದ್ವೇಷವನ್ನು ಸಾಧಿಸುತ್ತದೆ, ಕಾರ್ಕೋಟಕ ಹಾವಿನ ವಿಷದಂತೆ ವಿಷಯಗಳನ್ನು ಇಟ್ಟುಕೊಂಡು ಆಗೆಯನ್ನು ಸಾಧಿಸುತ್ತಾರೆ. ನಾವು ಸಾಧನೆಯ ಮೂಲಕ ಸಂಬಂಧಗಳ ಬೇಸಗೆಯನ್ನು ಬೆಳೆಸಿಕೊಳ್ಳಬೇಕು, ಒಟ್ಟಿನಲ್ಲಿ ನಾನು ಯಾರು ಎಂಬ ಪ್ರಶ್ನೆ ನನ್ನ ಮನದಲ್ಲಿ ಮೂಡಿದ ಹಾಗೆ ಅವುಗಳಿಗೆಲ್ಲ ಪರಿಹಾರಗಳನ್ನು ನಾವೇ ಕಂಡುಕೊಳ್ಳಬೇಕು ಆಗ ಮಾತ್ರ ಮನುಷ್ಯಗೆ ಹುಟ್ಟಿದ್ದಕ್ಕೂ ಸಾರ್ಥಕವಾಗುತ್ತದೆ.

ನಾನು ಎಂಥ ಕೆಲಸ ಮಾಡುತ್ತಿದ್ದೇನೆ? ನಾನು ಯಾರಿಗಾಗಿ ಮಾಡುತ್ತಿದ್ದೇನೆ? ಇದರಿಂದ ನನಗೆ ಏನು ಫಲ? ನಾನು ಯಾರಿಗಾಗಿ ಮಾಡಬೇಕಾಗಿತ್ತು? ಎಂದು ಮುಪ್ಪಿನ ಸಮಯದಲ್ಲಿ ಯೋಚನೆ ಮಾಡಿ, ಮನಸ್ಸಿಗೆ ಒಂದಿಷ್ಟು ನೆಮ್ಮದಿ ಒಂದಿಷ್ಟು ಉಲ್ಲಾಸ ವೈಶಿಷ್ಟತೆ ಗೌರವ ನಮ್ಮ ಬಳಿ ಬಂದು ಕೂರುತ್ತದೆ.

## ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆ ಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಶುಲ್ಕವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ನವಂಬರ್ 30 ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಡಿ.ಬಿ.ಟಿ ಮುಖಾಂತರ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು http://ssp.postmatric.karnataka.gov.in ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಸರ್ಕಾರದ ಕಚೇರಿಗಳಲ್ಲಿ ಲಂಚ ಇಲ್ಲದೆ ಏನು ಕೆಲಸವಾಗಲ್ಲ

» ಚಿತ್ರದುರ್ಗ

ಸರ್ಕಾರದ ಬಹುತೇಕ ಕಚೇರಿಗಳಲ್ಲಿ ಲಂಚ ಇಲ್ಲದೆ ಏನು ಕೆಲಸವಾಗುವುದಿಲ್ಲ ಇದರ ಬಗ್ಗೆ ಜಿಲ್ಲಾಧಿಕಾರಿಗಳಾದವರು ಆಯಾ ಇಲಾಖೆಯ ಮುಖ್ಯಸ್ಥರನ್ನು ಕರೆಯಿಸಿ ತಾವು ಪಡೆಯುವ ವೇತನಕ್ಕೆ ತಕ್ಕಂತೆ ಲಂಚ ಇಲ್ಲದೆ ಸರ್ಕಾರಿ ಕೆಲಸವನ್ನು ಮಾಡುವಂತೆ ಸೂಚನೆಯನ್ನು ನೀಡುವಂತೆ ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಬಿ.ಇ.ಜಗದೀಶ್ ಜಿಲ್ಲಾಧಿಕಾರಿ ಗಳನ್ನು ಒತ್ತಾಯಿಸಿದ್ದಾರೆ.




ಭ್ರಷ್ಟಾಚಾರ ಮುಕ್ತ ಚಿತ್ರದುರ್ಗವನ್ನಾಗಿ ಮಾಡುವ ಸಲುವಾಗಿ ಆಮ್ ಆದ್ಮಿ ಪಾರ್ಟಿ ಚಿತ್ರದುರ್ಗ ಘಟಕದವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ನಿನ್ನೆಯಿಂದ ಹಮ್ಮಿಕೊಂಡಿದ್ದ ಮೂರು ದಿನಗಳ ಕಾಲ ಉಪವಾಸ ಸತ್ಯಾಗ್ರಹದ ಎರಡನೇ ದಿನವಾದ ಇಂದು ಸತ್ಯಾಗ್ರಹದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಂದಾಯ, ಆರ್.ಟಿ.ಓ. ಆಸ್ತಿ ನೊಂದಾಣಿ, ಸರ್ವೇ, ಖಜಾನೆ, ನಗರಸಭೆ, ಲೋಕೋಪಯೋಗಿ ಇಲಾಖೆ, ಪಂಚಾಯತ್ ರಾಜ್ ಇಂಜನಿಯರ್, ತಾಲ್ಲೂಕು ಕಚೇರಿ, ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಸಾರ್ವಜನಿಕರು ತಮ್ಮ ಕೆಲಸವನ್ನು ಮಾಡಿಸಿಕೊಳ್ಳಲು ಲಂಚವನ್ನು ನೀಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಯಾವ ಇಲಾಖೆಯಲ್ಲಿಯೂ ಸಹಾ ಜನತೆ ತಮ್ಮ ಕೆಲಸವನ್ನು ಮಾಡಿಸಿಕೊಳ್ಳಬೇಕಾದರೆ ಲಂಚವನ್ನು ನೀಡಲೇ ಬೇಕಾದ ಅನಿವಾರ್ಯತೆ ಇಂದು ನಿರ್ಮಾಣವಾಗಿದೆ ಎಂದು ದೂರಿದರು.

ಸರ್ಕಾರಿ ಕಚೇರಿಯಲ್ಲಿ ಲಂಚವನ್ನು ಪಡೆಯುವುದು ತಪ್ಪು ಎಂದು ಗೊತ್ತಿದ್ದರು ಸಹಾ ಸರ್ಕಾರಿ ಇಲಾಖೆಯ ಸಿಬ್ಬಂದಿಗಲು ಆವರ ಅನುಕೂಲಕ್ಕೆ ತಕ್ಕಂತೆ ಲಂಚವನ್ನು ಪಡೆಯುತ್ತಿದ್ದಾರೆ ಇದರ ಬಗ್ಗೆ ಎಲ್ಲರಿಗೂ ತಿಳಿದಿದ್ದರು ಸಹಾ ಯಾರು ಮಾತನಾಡುತ್ತಿಲ್ಲ ತಮ್ಮ ಕೆಲಸವಾದರೆ ಸಾಕು ಎಂಬಂತೆ ಇದ್ದಾರೆ ಇದರ ಬಗ್ಗೆ ಜಿಲ್ಲಾಧಿಕಾರಿಗಳು ಗಮನ ನೀಡುವುದರ ಮೂಲಕ ಆಯಾ ಇಲಾಖೆಯ ಮುಖ್ಯಸ್ಥರನ್ನು ಕರೆಯಿಸಿ ಸಾರ್ವಜನಿಕರು ವಿವಿಧ ರೀತಿಯ ಕೆಲಸಕ್ಕಾಗಿ ತಮ್ಮ ಕಚೇರಿಗೆ ಬಂದಾಗ ಅವರ ಕೆಲಸವನ್ನು ಅವರನ್ನು ಓಡಾಡಿಸದೇ ಶೀಘ್ರವಾಗಿ ಲಂಚವನ್ನು ಪಡೆಯದೇ ಕೆಲಸವನ್ನು ಮಾಡಿಕೊಡುವಂತೆ ಸೂಚನೆಯನ್ನು ನೀಡುವಂತೆ ಜಿಲ್ಲಾಧಿಕಾರಿಗಳನ್ನು ಜಗದೀಶ್ ಒತ್ತಾಯಿಸಿದ್ದಾರೆ.

ಭ್ರಷ್ಟಾಚಾರ ಮುಕ್ತ ಚಿತ್ರದುರ್ಗವನ್ನಾಗಿ ಮಾಡುವ ಸಲುವಾಗಿ ಆಮ್ ಆದ್ಮಿ ಪಾರ್ಟಿ ಚಿತ್ರದುರ್ಗ ಘಟಕದವತಿಯಿಂದ ನಿನ್ನೆಯಿಂದ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಂಡಿದೆ ಇದನ್ನು ನೋಡಿ ಸರ್ಕಾರಿ ನೌಕರರು ಲಂಚವನ್ನು ಪಡೆಯದೆ ಸಾರ್ವಜನಿಕರ ಕೆಲಸವನ್ನು ಉಚಿತವಾಗಿ ಮಾಡಿಕೊಡದಿದ್ದರೆ ಮುಂದಿನ ದಿನದಲ್ಲಿ ನಮ್ಮ ಹೋರಾಟವನ್ನು ತೀವ್ರಗೊಳಿಸಿ ಲಂಚವನ್ನು ಪಡೆಯುವ ಸರ್ಕಾರಿ ನೌಕರನ ಮನೆ ಮತ್ತು ಕಚೇರಿ ಮುಂದೆ ಹೋರಾಟವನ್ನು ಮಾಡಲಾಗುವುದೆಂದು ಎಚ್ಚರಿಸಿದ್ದು,ಇ.ಡಿ.ಐ.ಟಿ.ಲೋಕಾಯುಕ್ತರು ಸರ್ಕಾರಿ ನೌಕರ ಲಂಚವನ್ನು ಪಡೆದಾಗ ಧಾಳಿಯನ್ನುಮಾಡದೇಮುಂಚಿತವಾಗಿಯೆ ಅಂತಹರನ್ನು ಪತ್ತೆ ಮಾಡಿ ಅವರ ಮೇಲೆ ಧಾಳಿಯನ್ನು ಮಾಡುವುದರ ಮೂಲಕ ಅವರಿಗೆ ತಕ್ಕ ಪಾಠವನ್ನು ಕಲಿಸಬೇಕೆಂದು ಮನವಿ ಮಾಡಿದರು.

ಈ ಸತ್ಯಾಗ್ರಹದಲ್ಲಿ ಪ್ರಧಾನ ಕಾರ್ಯದರ್ಶಿ ಲೋಕೇಶ್ ಕಾರ್ಯದರ್ಶಿ ರಾಮಪ್ಪ, ಮಹಿಳಾ ಘಟಕದ ಅಧ್ಯಕ್ಷರಾದ ಜ್ಯೋತಿ ಲಕ್ಷ್ಮೀ, ಪ್ರಧಾನ ಕಾರ್ಯದರ್ಶಿ ವಿನೋದಮ್ಮ, ಸಂಘಟನಾ ಕಾರ್ಯದರ್ಶಿ ಶಿವಮ್ಮ. ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾದ ಸೈಯದ್ ತನ್ವೀರ್, ಕಾರ್ಯದರ್ಶಿ ಸೈಯದ್ ದಾವೂದ್, ಹೊಳಲ್ಕೆರೆ ಘಟಕದ ಅಧ್ಯಕ್ಷ ಮಲ್ಲಿಕಾರ್ಜನಪ್ಪ, ಜಂಟಿ ಕಾರ್ಯದರ್ಶಿ ಲೋಕೇಶಪ್ಪ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ರವಿ, ಹೊಸದುರ್ಗ ಅಧ್ಯಕ್ಷ ರಾಜು, ಜಿಲ್ಲಾ ಮಾಧ್ಯಮ ಸಲಹೆಗಾರ ಲೋಹಿತ್, ಯುವ ಘಟಕದ ಅಧ್ಯಕ್ಷ ರವಿ, ಚಂದ್ರಮ್ಮ, ಪರಮೇಶ್ವರಪ್ಪ, ಸೇರಿದಂತೆ ಇತರರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T